ಸಂಪುಟ : 10 ಸಂಚಿಕೆ 2 ಪುಟ : 4+2 ಬೆಲೆ: 3.00 ಸೋಮವಾರ ಜನವರಿ 27 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 2 Pages : 4+2 Price : 3.00 Monday January 27 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




### 76ನೇ ಗಣರಾಜ್ಯೋತ್ಸವ ಧ್ವಜಾರೋಹಣ ನೆರವೇರಿಸಿದ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ

# ಶೋಷಣೆಮುಕ್ತ, ಸಮಾನತೆಯ ಸಮಾಜ ಕಟ್ಟುವಲ್ಲಿ ಸಮರ್ಪಿತರಾಗೋಣ

**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಪ್ರಜೆಗಳಾದ ನಾವು ಭಾರತವನ್ನು ಒಂದು ಸಾರ್ವಭೌಮ, ಸಮಾಜವಾದಿ, ಜ್ಯಾತ್ಯಾತೀತ, ಪ್ರಜಾಸತ್ತಾತ್ಮಕ ಗಣತಂತ್ರವನ್ನಾಗಿ ವಿಧಿಯುಕ್ತವಾಗಿ ಸ್ಥಾಪಿಸಿದ್ದೇವೆ. ಸಾಮಾಜಿಕ ನ್ಯಾಯವನ್ನು ರಾಷ್ಟ್ರದ ಎಲ್ಲಾ ಪ್ರಜೆಗಳಿಗೆ ಒದಗಿಸುವ ಸಂವಿಧಾನ ನಮ್ಮದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.


ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ರವಿವಾರ ಜರುಗಿದ ಗಣರಾಜ್ಯೋತ್ಸ ದಿನಾಚರಣೆಯ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ನಮ್ಮ ದೇಶ ಪ್ರಪಂಚದಲ್ಲಿಯೇ ಅತಿದೊಡ್ಡ ಪ್ರಜಾಸತ್ತಾತ್ಮಕವಾದ ಆಡಳಿತವನ್ನು ಹೊಂದಿದ ಗಣರಾಜ್ಯವಾಗಿದ್ದು, ಜನರಿಂದ-ಜನರಿಗಾಗಿ ಆಡಳಿತ ಪ್ರಜಾಸತ್ತಾತ್ಮಕ ವ್ಯವಸ್ಥೆಯ ಧ್ಯೇಯ ಮಂತ್ರ. ಈ ಧ್ಯೇಯ ಮಂತ್ರವನ್ನು ಸಾಕಾರಗೊಳಿಸಲು ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರರ ನೇತೃತ್ವದಲ್ಲಿ ರಚಿಸಲ್ಪಟ್ಟ ಸಂವಿಧಾನವನ್ನು 1950ರ ಜನವರಿ 26ರಂದು ಅಂಗೀಕರಿಸಿ ನಮ್ಮ ದೇಶವನ್ನು ಸರ್ವತಂತ್ರ ಸ್ವತಂತ್ರ, ಸಾರ್ವಭೌಮ ಗಣರಾಜ್ಯವೆಂದು ಘೋಷಣೆ ಮಾಡಲಾಯಿತು ಎಂದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿವೃದ್ಧಿಯ ಹರಿಕಾರರು ಹಾಗೂ ಹಸಿವು ಮುಕ್ತ ಕರ್ನಾಟಕ ಮಾಡಿದ ಮುಖ್ಯಮಂತ್ರಿ ಜಿಲ್ಲೆಯ ಅಭಿವೃದ್ಧಿಗೆ ಸಹಕಾರ ನೀಡಿದ್ದು, ದಿನಾಂಕ 15.12.2024ರಂದು ಜಿಲ್ಲೆಯ ರೋಣಕ್ಕೆ ಆಗಮಿಸಿ, ರೋಣ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 19689.97 ಲಕ್ಷ ರೂ. ವೆಚ್ಚದಲ್ಲಿ 11 ಕಾಮಗಾರಿಗಳ ಶಂಕು ಸ್ಥಾಪನೆಗಳನ್ನು ಹಾಗೂ 5 ಕಾಮಗಾರಿಗಳ ಉದ್ಘಾಟನೆ ಸೇರಿದಂತೆ ಒಟ್ಟು 16 ಕಾಮಗಾರಿಗಳಿಗೆ ಚಾಲನೆ ನೀಡುವ ಮೂಲಕ ಅಭಿವೃದ್ಧಿಯ ದಾಪುಗಲನ್ನು ಇಡಲಾಗಿದೆ ಎಂದು ಸಚಿವ ಎಚ್. ಕೆ. ಪಾಟೀಲ ತಿಳಿಸಿದರು.

ಕನ್ನಡ ನಾಡು ಕಂಡ ಬಲು ಅಪರೂಪದ ರಾಜಕಾರಣಿ, ನಾಡು ಮೆಚ್ಚಿದ ಜನನಾಯಕ, ಸಹಕಾರ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲರ ಜನ್ಮ ಶತಮಾನೋತ್ಸವ ವರ್ಷಾಚರಣೆ ನಡೆಯುತ್ತಿರುವ ಪುಣ್ಯ ಪ್ರಸಂಗದಲ್ಲಿ ನಾವು ಶೋಷಣೆಮುಕ್ತ, ಸಮಾನತೆಯ ಸಮಾಜ ಕಟ್ಟುವಲ್ಲಿ ಕ್ರೀಯಾಶೀಲ ಪೂರ್ವಕವಾಗಿ ತೊಡಗಿಸಿಕೊಳ್ಳಲು ಸಮರ್ಪಿತರಾಗಲು ದಾಪುಗಾಲುಗಳನ್ನಿಡೋಣ ಎಂದು ಕರೆ ನೀಡಿದರು.



ಭಾರತ ಗಣರಾಜ್ಯವಾಗಿ ಪ್ರಜೆಗಳೇ ಪ್ರಭುಗಳಾಗಿ ಬಾಳಲು, ಹೆಮ್ಮೆಯಿಂದ ಬದುಕಲು ಸಂವಿಧಾನ ನಮಗೆಲ್ಲ ಶ್ರೀರಕ್ಷೆ ನೀಡಿದೆ. ನಮ್ಮ ರಾಷ್ಟ್ರವನ್ನು ಇನ್ನಷ್ಟು ಬಲಿಷ್ಠ ರಾಷ್ಟ್ರವಾಗಿ ಸರ್ವರಿಗೂ ಸಾಮಾಜಿಕ ನ್ಯಾಯದ ಅತ್ಯಂತ ಪ್ರಬಲ ಅಸ್ತವಾಗಿರುವ ನಮ್ಮ ಸಂವಿಧಾನವು ನಮಗೆ ಸಾಮಾಜಿಕ, ಆರ್ಥಿಕ, ರಾಜಕೀಯ, ಶೈಕ್ಷಣಿಕ, ನ್ಯಾಯ ಪಡೆಯುವ ಅಧಿಕಾರ ನೀಡಿದೆ. ಸಮಾಜದಲ್ಲಿರುವ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ನಮ್ಮ ಪ್ರಜಾಪ್ರಭುತ್ವದಲ್ಲಿದೆ. ಸಮಸ್ಯೆ ಮುಕ್ತವಾದ, ಶೋಷಣೆ ಮುಕ್ತವಾದ ಸಮಾಜವನ್ನಾಗಿಸಲು ನಮ್ಮ ಸಂವಿಧಾನದ ಪಥ ದಾರಿದೀಪವಾಗಿದೆ. ನಾವೆಲ್ಲ ಆ ಪಥದಲ್ಲಿ ಸಾಗಿ ಸಮೃದ್ಧ ಭಾರತ ಕಟ್ಟುವ ಕನಸನ್ನು ನನಸಾಗಿಸಬೇಕಿದೆ.

**– ಡಾ. ಎಚ್.ಕೆ. ಪಾಟೀಲ. ಜಿಲ್ಲಾ ಉಸ್ತುವಾರಿ ಸಚಿವರು.**

ಗದುಗಿನಲ್ಲಿ ಹೆಮ್ಮೆಯಿಂದ ತಲೆಯೆತ್ತಿರುವ ವಿಶೇಷ ಬೆಳವಣಿಗೆಯಿಂದ ಎಲ್ಲರ ಆಕರ್ಷಣೆಯಾಗಿರುವ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ವಿಶ್ವವಿದ್ಯಾಲಯಕ್ಕೆ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ನಾಮಕರಣವಾದ ಸಂತಸದ ಪ್ರಸಂಗದಲ್ಲಿ ನಾವು ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರರನ್ನು ನಮಿಸೋಣ. ಪ್ರಪಂಚದ ಶ್ರೇಷ್ಠ ಸಂವಿಧಾನ ರಚಿಸಿದ ಕೀರ್ತಿಗೆ ಭಾಜನರಾಗಿರುವ ಡಾ. ಅಂಬೇಡ್ಕರ ಜೊತೆಗೆ ಸಂವಿಧಾನ ರಚನಾ ಸಮಿತಿಯ ಅಧ್ಯಕ್ಷರಾಗಿದ್ದ ಡಾ. ಬಾಬು ರಾಜೇಂದ್ರ ಪ್ರಸಾದ, ಪಂಡಿತ ಜವಾಹರಲಾಲ ನೆಹರು, ಸರ್ದಾರ ವಲ್ಲಭಬಾಯಿ ಪಟೇಲ ಸೇರಿ 300ಕ್ಕೂ ಅಧಿಕ ಪ್ರತಿಭಾವಂತ ಪಂಡಿತರನ್ನು ಅವರ ಅವಿರತ ಶ್ರಮಕ್ಕೆ ಭೌದ್ಧಿಕ ಕೊಡುಗೆಗೆ ಅವರ ತಪಸ್ವಿ ಸ್ವಭಾವಕ್ಕೆ ಮಣಿದು ಸ್ಮರಿಸಿ ನಮ್ಮ ▶▶3ನೇ ಪುಟಕ್ಕೆ

## ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ -ಬೆಟಗೇರಿ ಅವಳಿ ನಗರದಲಿ ಜನವರಿ 27 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 22 – ಗಂಗಿಮಡಿ, ಶುದ್ಧ ನೀರಿನ ಘಟಕದ 5 ಲೈನ್‌ಗಳು. ವಾರ್ಡ್ ನಂ.33 – ನಾವಳ್ಳಿ, ಬಸಯ್ಯ ಡಾಕ್ಟರ ಲೈನ್, ಪಿಡ್ಡಿಯವರ ಲೈನ್, ಕಲಾಲ, ಅಬ್ಬಿಗೇರಿ, ಮಂಗಳೂರು ಸರ್ ಲೈನ್, ಮುಂಡೆವಾಡಿ, ಮೆಹರವಾಡೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 24, 26 – ಮಕಾನಗಲ್ಲಿ, ಸಾಲಮನೆ, ವೀರೇಶ್ವರ ಲೈಬ್ರರಿ, ಅಬ್ಬಿಗೇರಿ ಕಾಂಪೌಂಡ್, ತೆಗ್ಗಿನ ಲಾಟ್, ಕಮ್ಮಾರ ಸಾಲ, ಕಾಯಿಪಲ್ಲೆ ಮಾರ್ಕೆಟ್, ಉಡುಚಮ್ಮನ ಗುಡಿ, ಉರ್ದು ಶಾಲೆಯ ಹಿಂದಿನ ಭಾಗ, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 27 – ಕಾಶಿ ವಿಶ್ವನಾಥನಗರ, ಅಸೂಟಿಯವರ ಲೈನ್, ಹನುಮಂತ ದೇವರು ಗುಡಿ, ಕಣವಿಯವರ ಲೈನ್, ದುರ್ಗಮ್ಮನ ಗುಡಿ, ಮಾಳಕೋಟೇಶ್ವರ ಗುಡಿ, ವಿ ಆರ್ ಎಲ್ ಆಫೀಸ್, ಕೇಶವನಗರ, ಸಂಕಣ್ಣವರ ಲೇಔಟ್, ಸಂಭಾಪುರ ರಸ್ತೆ. ವಾರ್ಡ್ ನಂ. 34, 35 – ನೀಲಮ್ಮ ತಾಯಿ ಮಠದ ಲೈನ್, 1ನೇ ರಸ್ತೆ, 2ನೇ ರಸ್ತೆ ಗಣಪತಿ ಗುಡಿ ಸಚ್ಚಿದಾನಂದಮಠ, ಈಶ್ವರ ಗುಡಿ, ಹನುಮಂತ ದೇವರ ಗುಡಿ ಲೈನ್, ಈ ಡಬ್ಲ್ಯೂ ಎಸ್, ಗಣಪತಿ ಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 – ಭಾಂಡಗೆ ಲೈನ್, ಡಂಬಳದವರ ಲೈನ್, ಗುಂಪಿನ ಮನೆ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ನಗರಸಭೆ ಆಯುಕ್ತರು ತಿಳಿಸಿದ್ದಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಳಪೆ ಕಾಮಗಾರಿ । ಈಜುಕೊಳ ಕಾಮಗಾರಿ ಸ್ಥಗಿತಗೊಳಿಸಲು ಶಾಸಕ ಜಿ.ಎಸ್. ಪಾಟೀಲ ಸೂಚನೆ

# 'ನಿಮ್ಮ ಮನೆಯನ್ನೂ ಹೀಗೆಯೇ ಕಟ್ಟಿಸುತ್ತೀರಾ?'

**■ವಿಜಯಸಾಕ್ಷಿ ಸುದ್ದಿ, ರೋಣ**

ಇಲ್ಲಿನ ತಾಲೂಕಾ ಕ್ರೀಡಾಂಗಣದಲ್ಲಿ 2 ಕೋಟಿ ರೂಗಳ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಈಜುಕೊಳದ ಸ್ಥಳಕ್ಕೆ ಶಾಸಕ ಜಿ.ಎಸ್. ಪಾಟೀಲ ಭೇಟಿ ನೀಡಿ, ಕಾಮಗಾರಿಯನ್ನು ಸ್ಥಗಿತಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚಿಸಿದ ಘಟನೆ ರವಿವಾರ ಜರುಗಿತು.

ರೋಣ ಪಟ್ಟಣದ ಕ್ರೀಡಾಪಟುಗಳ ಇಚ್ಛೆಯಂತೆ ಕ್ರೀಡಾಂಗಣದಲ್ಲಿ ಈಜುಕೋಳವನ್ನು ನಿರ್ಮಿಸಲಾಗುತ್ತಿದೆ. ನಾಗರಿಕ ಸಮುದಾಯದ ಹಾಗೂ ಕ್ರೀಡಾಪಟುಗಳ ಬೆಳವಣಿಗೆಯ ಉದ್ದೇಶದಿಂದ 2 ಕೋಟಿ ರೂಗಳ ವೆಚ್ಚದಲ್ಲಿ ಈಜುಕೊಳವನ್ನು ನಿರ್ಮಾಣ ಮಾಡಲಾಗುತ್ತಿದ್ದು, ಶಾಸಕ ಜಿ.ಎಸ್. ಪಾಟೀಲರು ವೀಕ್ಷಣೆಗೆ ತೆರಳಿದ್ದರು. ಅಲ್ಲಿ ನಡೆಯುತ್ತಿರುವ ಕಳಪೆ ಕಾಮಗಾರಿಯನ್ನು ಕಂಡು ಕೆಲ ಕ್ಷಣ ತಬ್ಬಿಬ್ಬಾದ ಶಾಸಕರು, ಈ ರೀತಿ ಕೆಲಸ ನಿರ್ವಹಿಸುವ ಅಗತ್ಯವಿಲ್ಲ. 2 ಕೋಟಿ ರೂಗಳ ವೆಚ್ಚದಲ್ಲಿ ಈಜುಕೊಳವನ್ನು ನಿರ್ಮಿಸಲಾಗುತ್ತಿದೆ. ಸರಕಾರದ ಅನುದಾನಕ್ಕೆ ಬೆಲೆ ಇಲ್ಲವೇ ಎಂದು ಗುತ್ತಿಗೆದಾರರನ್ನು ತರಾಟೆಗೆ ತೆಗೆದು-ಕೊಂಡ ಶಾಸಕರು, ಸರಕಾರ ನೀಡಿದ ಅನುದಾನ ಸದ್ಬಳಕೆಯಾಗಬೇಕು. ಇಲ್ಲಿ ನೋಡಿದರೆ ಕಾಮಗಾರಿ ಕಳಪೆ ಮಟ್ಟದ್ದಿದೆ. ಮುಖ್ಯವಾಗಿ ನೀರನ್ನು ಸಹ ಬಳಕೆ ಮಾಡುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿ ಕಾಮಗಾರಿಯನ್ನು ಕೂಡಲೇ ಸ್ಥಗಿತಗೊಳಿಸುವಂತೆ ಸೂಚಿಸಿದರು. ಒಟ್ಟಿನಲ್ಲಿ, ಈಜುಕೊಳದ ಕಾಮಗಾರಿ ವೀಕ್ಷಿಸಿ ಸ್ಥಗಿತಗೊಳಿಸಲು ಸೂಚನೆ ನೀಡಿದ ಶಾಸಕ ಜಿ.ಎಸ್. ಪಾಟೀಲರ ನಡೆಯಿಂದ ಅಧಿಕಾರಿಗಳು ಹಾಗೂ ಗುತ್ತಿಗೆದಾರರಲ್ಲಿ ಭಯ ಆವರಿಸಿದಂತಾಗಿದೆ.



ಈ ಜುಕೊಳ ನಿರ್ಮಾಣಕ್ಕೆ ಉಪಯೋಗಿಸುತ್ತಿರುವ ಎಲ್ಲ ವಸ್ತುಗಳನ್ನು ಪರಿಶೀಲಿಸಿದ ಶಾಸಕ ಜಿ.ಎಸ್. ಪಾಟೀಲ, ನಿಮ್ಮ ಸ್ವಂತ ಮನೆಗಳನ್ನು ಹೀಗೆಯೇ ನಿರ್ಮಿಸುತ್ತೀರಾ, ಅಲ್ಲದೆ 2 ಕೋಟಿ ರೂ ಅನುದಾನದ ಈ ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು ಎಂಬ ಅರಿವು ನಿಮಗಿಲ್ಲವೇ ಎಂದು ಗುತ್ತಿಗೆದಾರರನ್ನು ಪ್ರಶ್ನಿಸಿದರು. ಇಂತಹ ಕಳಪೆ ಕಾಮಗಾರಿಗಳಿಂದ ಕೆಟ್ಟ ಹೆಸರು ತರುತ್ತೀರಿ. ನಾನು ಇದಕ್ಕೆ ಒಪ್ಪುವುದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

# ಪಂಚ ಗ್ಯಾರಂಟಿ ಯೋಜನೆ ದೇಶಕ್ಕೇ ಮಾದರಿ

**■ವಿಜಯಸಾಕ್ಷಿ ಸುದ್ದಿ, ರೋಣ**

ರಾಜ್ಯ ಸರಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಯು ಇಡೀ ದೇಶಕ್ಕೆ ಮಾದರಿಯಾಗಿದೆ ಎಂದು ತಹಸೀಲ್ದಾರ್ ನಾಗರಾಜ ಕೆ ಹೇಳಿದರು.

ಅವರು ತಾಲೂಕಾ ಕ್ರೀಡಾಂಗಣದಲ್ಲಿ ಜರುಗಿದ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮದ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಸಂವಿಧಾನದ ಇಚ್ಛೆಯಂತೆ ತುಳಿತಕ್ಕೊಳಗಾದ ಜನರು ಆರ್ಥಿಕ ಹಾಗೂ ಸಾಮಾಜಿಕವಾಗಿ ಬಲಿಷ್ಠವಾಗಬೇಕು ಎಂಬ ದೃಷ್ಟಿಯಿಂದ ಸರಕಾರ ಐದು ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿರುವುದು ಸ್ವಾಗತರ್ಹವಾಗಿದೆ ಎಂದರು.

ಭಾರತ ಸಹೋದರತೆ, ಏಕತೆ ಹಾಗೂ ಸೌಹಾರ್ದತೆಯ ರಾಷ್ಟ್ರವಾಗಿದೆ. ಕೇಂದ್ರ ಸರಕಾರ ಕೂಡ ಅನೇಕ ಮಹತ್ವದ ಯೋಜನೆಗಳನ್ನು ಜಾರಿಗೆ ತಂದು, ದೇಶದ ಬಲವರ್ಧನೆಗೆ ಶ್ರಮಿಸುತ್ತಿದೆ. ಜಾತಿ-ಧರ್ಮಗಳ ಸಂಕೋಲೆಗಳನ್ನು ದಾಟಿ ನಾವು ಬದುಕಬೇಕಿದೆ. ಅಂದಾಗ ಮಾತ್ರ ಸದೃಢ ಭಾರತ ನಿರ್ಮಿಸಲು ಸಾಧ್ಯ ಎಂದರು.



10ನೇ ತರಗತಿಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಶಾಸಕ ಜಿ.ಎಸ್. ಪಾಟೀಲ ಲ್ಯಾಪ್‌ಟ್ಯಾಪ್ ವಿತರಿಸಿದರು. ವಿವಿಧ ಇಲಾಖೆಗಳಲ್ಲಿ ಉತ್ತಮ ಸೇವೆ ಸಲ್ಲಿಸಿದ ನೌಕರರನ್ನು ಸನ್ಮಾನಿಸಲಾಯಿತು. ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಇತ್ತೀಚೆಗೆ ಪ್ರವಾಸದ ಸಂದರ್ಭದಲ್ಲಿ ಸಮುದ್ರದ ಅಲೆಗೆ ಸಿಕ್ಕು ಮರಣ ಹೊಂದಿದ್ದ ಮೇವುಂಡಿ ಗ್ರಾಮದ ಪೀರಸಾಬ ನದಾಫ್ ಎಂಬುವರ ಕುಟುಂಬಕ್ಕೆ ಮುಖ್ಯಮಂತ್ರಿ ಪರಿಹಾರ ನಿಧಿಯಿಂದ 2 ಲಕ್ಷ ರೂಗಳ ಚೆಕ್‌ನ್ನು ಶಾಸಕ ಜಿ.ಎಸ್. ಪಾಟೀಲ ಮೃತನ ತಾಯಿಗೆ ಹಸ್ತಾಂತರಿಸಿದರು.

ಪುರಸಭೆ ಅಧ್ಯಕ್ಷೆ ಗೀತಾ ಮಾಡಲಗೇರಿ, ಉಪಾಧ್ಯಕ್ಷ ದುರ್ಗಪ್ಪ ಹಿರೇಮನಿ, ಸಂಗನಗೌಡ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಸಂಗಪ್ಪ ಜಿಡ್ಡಿಬಾಗಿಲ, ಪ್ರಕಾಶ ಹೊಸಳ್ಳಿ, ಇಒ ಚಂದ್ರಶೇಖರ್ ಕಂದಕೂರ, ಬಿಇಒ ರುದ್ರಪ್ಪ ಹುರಳಿ, ಸಿಪಿಐ ಎಸ್.ಎಸ್. ಬಿಳಗಿ, ಜೆ.ಟಿ. ಕೊಪ್ಪದ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಶಿಕ್ಷಕರು ಉಪಸ್ಥಿತರಿದ್ದರು.

## ಆಟೋ ಚಾಲಕರು ಆರೋಗ್ಯದ ಕಾಳಜಿ ವಹಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಆಟೋ ಚಾಲಕರು ದಿನನಿತ್ಯ ತಮ್ಮ ಉಪಜೀವನಕ್ಕಾಗಿ ಹಗಲು-ರಾತ್ರಿ ಎನ್ನದೆ ಆಟೋ ಚಾಲನೆ ಮಾಡಿಕೊಂಡು ಬದುಕುತ್ತಿದ್ದಾರೆ. ಚಾಲನೆಯ ಜೊತೆಗೆ ಆಟೋ ಚಾಲಕರು ತಮ್ಮ ಆರೋಗ್ಯದ ಕಡೆ ಹೆಚ್ಚು ಗಮನಹರಿಸುವ ಅವಶ್ಯಕತೆ ಇದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ್ ಹೇಳಿದರು.

ಗದಗ ಜಿಲ್ಲಾ ಜೈ ಭೀಮ್ ಆಟೋ ರಿಕ್ಷಾ ಮಾಲಕರ ಸಂಘ, 76ನೇ ಪ್ರಜಾರಾಜ್ಯೋತ್ಸವದ ಅಂಗವಾಗಿ ಅಪಘಾತ ರಹಿತವಾಗಿ ಆಟೋ ಚಾಲನೆ ಮಾಡಿದ ಚಾಲಕರಿಗೆ ಅಭಿನಂದನಾ ಪ್ರಶಸ್ತಿ ಮತ್ತು ಸಮವಸ್ತ್ರ ವಿತರಣೆ, ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಗದಗ-ಬೆಟಗೇರಿ ಅವಳಿ ನಗರದಾದ್ಯಂತ ಇತ್ತೀಚೆಗೆ ಸಾಕಷ್ಟು ಜನದಟ್ಟಣೆ ಆಗಿದೆ. ಜೊತೆಗೆ ದ್ವಿಚಕ್ರ ವಾಹನಗಳ ಸಂಖ್ಯೆ ಏರಿಕೆ ಕಂಡಿದ್ದು, ಆಟೋ ಸಂಖ್ಯೆಯೂ ಹೆಚ್ಚಾಗಿದೆ. ಇದರ ನಡುವೆಯೂ ಅತ್ಯಂತ ಜಾಗರೂಕತೆಯಿಂದ ಯಾವುದೇ ಅಪಘಾತ ಆಗದ ರೀತಿ ಚಾಲನೆ ಮಾಡುವುದು ಸವಾಲಿನ ಕೆಲಸ ಎಂದು ಹೇಳಿದರು.




ಸಾಕಷ್ಟು ಜನ ದಟ್ಟಣೆ ನಡುವೆಯೂ ಅಪಘಾತವಾಗದ ಹಾಗೆ ಚಾಲನೆ ಮಾಡಿದ ಆಟೋ ಚಾಲಕರಿಗೆ ಅಭಿನಂದನಾ ಕಾರ್ಯಕ್ರಮ ಆಯೋಜಿಸಿದ್ದು ಸಂತೋಷದ ವಿಷಯವಾಗಿದೆ. ಎಲ್ಲಾ ಆಟೋ ಚಾಲಕರು ಜಾಗರೂಕತೆಯಿಂದ ಚಾಲನೆ ಮಾಡಿದರೆ ಅದೊಂದು ದೊಡ್ಡ ಸಾಧನೆ ಆಗಲಿದೆ. ಎಲ್ಲಾ ಆಟೋ ಚಾಲಕರ ಜೀವನ ಉಜ್ವಲವಾಗಿರಲಿ ಎಂದು ಹಾರೈಸಿದರು.


ಈ ಸಂದರ್ಭದಲ್ಲಿ ಪರಶುರಾಮ ಪೂಜಾರ, ವಿನಾಯಕ ಬಳ್ಳಾರಿ, ಬಸವರಾಜ ಕಡೆಮನಿ, ಸುರೇಶ ಹುಲಿ, ಲಕ್ಷ್ಮಣ ಕಟ್ಟಿಮನಿ, ವಿಜಯ್ ಮುಳಗುಂದ, ಹರೀಶ್ ಭಾವಿಮನಿ, ಕೃಷ್ಣ ಪೂಜಾರ, ಭಾಷಾಸಾಬ್ ಮಲ್ಲಸಮುದ್ರ, ಚಾಂದಸಾಬ್ ಕೊಟ್ಟೂರ, ಎಸ್. ಎನ್. ಬಳ್ಳಾರಿ, ಬಿ.ಬಿ. ಅಸೂಟಿ, ಅಕ್ರ್ ಸಾಬ್ ಬಬರ್ಚಿ, ನಾಗರಾಜ ಮುಂತಾದವರು ಉಪಸ್ಥಿತರಿದ್ದರು.

### ದೆಹಲಿಯ ಕರ್ತವ್ಯ ಪಥದಲ್ಲಿ ನೆರೆದವರನ್ನು ಮಂತ್ರಮುಗ್ಧರನ್ನಾಗಿಸಿದ ರಾಜ್ಯದ ಸ್ತಬ್ಧಚಿತ್ರ

# ಕಲ್ಲಿನಲ್ಲಿ ಅರಳಿದ ಲಕ್ಕುಂಡಿ ಶಿಲ್ಪಕಲೆ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ರಾಷ್ಟ್ರದ ರಾಜಧಾನಿ ನವದೆಹಲಿಯ ಕರ್ತವ್ಯಪಥದಲ್ಲಿ ಭಾನುವಾರ ನಡೆದ ಗಣರಾಜ್ಯೋತ್ಸ ಸ್ತಬ್ಧಚಿತ್ರ ಪಥಸಂಚಲನದಲ್ಲಿ ಸರ್ವ ಜನಾಂಗದ ಶಾಂತಿಯ ತೋಟದಂತೆ ಕಂಗೊಳಿಸುತ್ತಿರುವ 'ಲಕ್ಕುಂಡಿ: ಶಿಲ್ಪಕಲೆಯ ತೊಟ್ಟಿಲು' ರಾಜ್ಯದ ಸ್ತಬ್ಧಚಿತ್ರವು ಅಲ್ಲಿ ನೆರೆದ ಜನಸ್ತೋಮವನ್ನು ಮಂತ್ರಮುಗ್ಧರನ್ನಾಗಿಸಿದ್ದಲ್ಲದೇ, ಕರತಾಡನದ ಮೂಲಕ ಅದ್ದೂರಿ ಸ್ವಾಗತ ದೊರೆಯಿತು.ರಾಜಧಾನಿಯ ಕರ್ತವ್ಯಪಥದಲ್ಲಿ ರಾಜ್ಯದ ಸ್ತಬ್ಧಚಿತ್ರ ಸಾಗುವುದರೊಂದಿಗೆ ಕರ್ನಾಟಕ ರಾಜ್ಯದ ಹಿರಿಮೆ, ಸರ್ವಧರ್ಮ ಸಮನ್ವಯ, ಶಾಂತಿ-ಸಹಬಾಳ್ವೆಯನ್ನು ಪ್ರತಿಪಾದಿಸಿತು. ಕರ್ನಾಟಕ ರಾಜ್ಯದ ಪರವಾಗಿ ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಪಾಲ್ಗೊಳ್ಳುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪ್ರತಿ ವರ್ಷ ತನ್ನ ವೈಶಿಷ್ಟಪೂರ್ಣ ಸ್ತಬ್ಧಚಿತ್ರಗಳ ಮೂಲಕವೇ ದೇಶದ ಗಮನ ಸೆಳೆಯುತ್ತಿದೆ. ನಮ್ಮ ರಾಜ್ಯವು ವರ್ಷದಿಂದ ವರ್ಷಕ್ಕೆ ಹೊಸ ಮೈಲಿಗಲ್ಲನ್ನು ಸ್ಥಾಪಿಸುತ್ತಲೇ ಸಾಗಿದ್ದು, ಈ ಬಾರಿ ಲಕ್ಕುಂಡಿಂ-ಮ ಶಿಲ್ಪಕಲೆಯಿಂದ ಕೂಡಿರುವ ಐತಿಹಾಸಿಕ ದೇವಾಲಯಗಳು ಎಲ್ಲರನ್ನು ಮಂತ್ರಮುಗ್ಧರನ್ನಾಗಿಸಿತು. ನಿಗದಿತ ರೂಪು-ರೇಷೆಗಳಂತೆ ಈ ಸ್ತಬ್ಧಚಿತ್ರ ದಿನಗಳ ಲೆಕ್ಕದಲ್ಲಿ ಮೈದಳೆದಿದೆ. ಕಡಿಮೆ ಅವಧಿಯಲ್ಲಿ ಅತ್ಯಂತ ಅಚ್ಚುಕಟ್ಟಾಗಿ ಸ್ತಬ್ಧಚಿತ್ರ ಕಣ್ಣಿಗೆ ಕಟ್ಟುವ ರೀತಿಯಲ್ಲಿ ಮೂಡಿ ಬಂದಿದ್ದು ವಿಶೇಷ ಎನಿಸಿದೆ.



ಅಹಿಂಸಾವಾದಿಯ ನೆಲೆಬೀಡು, ಶಿಲ್ಪಕಲೆಯ ತೊಟ್ಟಿಲಾದ ಲಕ್ಕುಂಡಿಯಲ್ಲಿ ಶೈವ, ಜೈನ ಮತ್ತು ವೈಷ್ಣವ ದೇವಾಲಯಗಳಿವೆ. ಕಲಾತ್ಮಕತೆಯಿಂದ ಕಂಗೊಳಿಸುವ ಇಲ್ಲಿನ ದೇವಾಲಯಗಳು ಸ್ತಬ್ಧಚಿತ್ರದಲ್ಲಿ ಅವುಗಳ ಪಡಿಯಚ್ಚಿನಂತೆ ಮೂಡಿಬಂದಿದ್ದು, ದೇವಾಲಯವೇ ಮರುಜೀವ ತಳೆದಂತಿದೆ. ರಾಜ್ಯವು ಪ್ರಸ್ತುತಪಡಿಸಿವ ಈ ಸ್ತಬ್ಧಚಿತ್ರವು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಸ್ತಬ್ಧಚಿತ್ರದಲ್ಲಿ ಲಕ್ಕುಂಡಿಯ ದೇವಾಲಯಗಳು ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸಿತು.

▶▶3ನೇ ಪುಟಕ್ಕೆ

## ನಾಳೆ ಕೈಲಾಸ ಆಶ್ರಮದ 33ನೇ ವಾರ್ಷಿಕೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ರಾಜರಾಜೇಶ್ವರಿ ನಗರ ಶ್ರೀ ಕೈಲಾಸ ಆಶ್ರಮ ಮಹಾಸಂಸ್ಥಾನಕ್ಕೆ ಸೇರಿದ ತಾಲೂಕಿನ ಹುಲಕೋಟಿ ಗ್ರಾಮದಲ್ಲಿರುವ ಶ್ರೀ ಕೈಲಾಸ ಆಶ್ರಮದ 33ನೇ ವಾರ್ಷಿಕೋತ್ಸವದ ಕಾರ್ಯಕ್ರಮ ಜನವರಿ 28ರ ಮಂಗಳವಾರ ಬೆಳಿಗ್ಗೆ 11ಕ್ಕೆ ಜರುಗಲಿದೆ.

ಶ್ರೀ ಕೈಲಾಸ ಆಶ್ರಮ ಮಹಾಸಂಸ್ಥಾನದ ಸಂಸ್ಥಾಪಕರಾದ ಶ್ರೀ ತಿರುಚ್ಚಿ ಮಹಾಸ್ವಾಮಿಗಳವರ ಪರಿಪೂರ್ಣ ಕೃಪಾಶೀರ್ವಾದದೊಂದಿಗೆ ಶ್ರೀ ಕೈಲಾಸ ಆಶ್ರಮ ಮಹಾಸಂಸ್ಥಾನದ ಪೀಠಾಧಿಪತಿಗಳಾದ ಶ್ರೀ ಜಯೇಂದ್ರಪುರಿ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು.

ಶಿವಾನಂದ ಮಠದ ಜಗದ್ಗುರು ಅಭಿನವ ಶಿವಾನಂದ ಮಹಾಸ್ವಾಮಿಗಳು, ಶಿರಹಟ್ಟಿಯ ಫಕೀರೇಶ್ವರ ಮಹಾಸಂಸ್ಥಾನ ಮಠದ ಫಕೀರೇಶ್ವರ ಮಹಾಸ್ವಾಮಿಗಳು, ಬೆಂಗಳೂರಿನ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾ. ನಿಶ್ಚಲಾನಂದನಾಥ ಸ್ವಾಮೀಜಿ, ಗದಗ-ವಿಜಯಪುರದ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷರಾದ ನಿರ್ಭಯಾನಂದ ಸರಸ್ವತಿ ಮಹಾಸ್ವಾಮಿಗಳು, ಗದಗನ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವ ವಿದ್ಯಾಲಯದ ಸಂಚಾಲಕರಾದ ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ ಅಕ್ಕನವರು "ಇಂದ್ರಿಯಾತೀತ ಜ್ಞಾನ ಅಥವಾ ಅನುಭವ" ಕುರಿತು ಉಪದೇಶಾಮೃತ ನೀಡುವರು.

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಕೈಲಾಸ ಆಶ್ರಮದ ಧರ್ಮದರ್ಶಿಗಳಾದ ಎಸ್. ಕೆ. ಪಾಟೀಲ, ರವಿ ಎಂ. ಮೂಲಿಮನಿ, ಕೆ.ಆರ್. ಪ್ರಭು, ಎನ್. ಆರ್. ಸಾವಕಾರ, ಜೆ.ಕೆ. ಜಮಾದಾರ್, ಹಯಗ್ರೀವಾಚಾರ್, ಸಿ.ಬಿ. ಕರಿಕಟ್ಟಿ, ಎಂ.ಡಿ. ದುರ್ಗಣ್ಣವರ, ಶಿವರತ್ನಕುಮಾರ ಪಾಟೀಲ, ಡಿ.ಜಿ. ಜೋಗಣ್ಣವರ ಪಾಲ್ಗೊಳ್ಳುವರು.

ಸಂಜೆ 6ಕ್ಕೆ ಜಗನ್ಮಾತೆ ಶ್ರೀ ರಾಜರಾಜೇಶ್ವರಿ ಮತ್ತು ಶ್ರೀಗಳವರ ಹೂವಿನ ಪಲ್ಲಕ್ಕಿಯಲ್ಲಿ ಉತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿವೆ.

**ನರರೋಗ ಶಸ್ತ್ರಚಿಕಿತ್ಸೆ, ಕೀಲು ಜೋಡಣೆ, ಟ್ರೋಮಾ ಕೇರ್ ಯೂನಿಟ್ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ**

## ವೈದ್ಯಕೀಯ ಕ್ಷೇತ್ರದಲ್ಲಿ ಆರ್‌ಎಂಎಸ್‌ಎಸ್ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ಗದಗ




ಹುಲಕೋಟಿಯ ರೂರಲ್ ಮೆಡಿಕಲ್ ಸರ್ವಿಸ್ ಸೊಸೈಟಿ ವೈದ್ಯಕೀಯ ವಿಜ್ಞಾನ ಕ್ಷೇತ್ರದಲ್ಲಿ ಸಮಾಜಕ್ಕೆ ಅಪಾರವಾದ ಕೊಡುಗೆ ನೀಡಿದೆ. ಆ ನಿಟ್ಟಿನಲ್ಲಿ ಮುಂದುವರೆದು ಬಡವರಿಗೆ ಹೆಚ್ಚು ಅನುಕೂಲವಾಗುವ ದೃಷ್ಟಿಯಿಂದ ನೂತನವಾಗಿ ಮೂರು ಹೊಸ ಆವಿಷ್ಕಾರಗಳನ್ನು ಉದ್ಘಾಟಿಸುತ್ತಿರುವುದು ಸಂತಸ ತಂದಿದೆ ಎಂದು ಕಾನೂನು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಹುಲಕೋಟಿಯ ಸ್ವಾಮಿ ವಿವೇಕಾನಂದ ಕಾಲೇಜು ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ರೂರಲ್ ಮೆಡಿಕಲ್ ಸರ್ವಿಸ್ ಸೊಸೈಟಿ, ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರ ಇವರ ಸಂಯುಕ್ತ ಆಶ್ರಯದಲ್ಲಿ ನೂತನವಾಗಿ ನರರೋಗ ಶಸ್ತ್ರಚಿಕಿತ್ಸೆ, ಕೀಲು ಜೋಡಣೆ ಹಾಗೂ ಟ್ರೋಮಾ ಕೇರ್ ಯೂನಿಟ್ ಉದ್ಘಾಟಿಸಿ ಮಾತನಾಡಿದ ಅವರು, ಕೆ.ಹೆಚ್. ಪಾಟೀಲರ ಕನಸು ನನಸಾಗುವ ದೃಷ್ಟಿಯಿಂದ ಯುವಕರ ತಂಡ ಹತ್ತಾರು ಹೊಸ ಯೋಜನೆಗಳ ಮೂಲಕ ಸಾಮಾಜಿಕ ಕಾರ್ಯ ಕೈಗೊಳ್ಳುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

ಕೆ.ಹೆಚ್. ಪಾಟೀಲ್ ಪ್ರತಿಷ್ಠಾನದ ಮೂಲಕ ದೇಶದಲ್ಲಿಯೇ ಮೊದಲ ಬಾರಿಗೆ ರೂರಲ್ ಮೆಡಿಕಲ್ ಸರ್ವಿಸ್ ಸೊಸೈಟಿ ಸಹಯೋಗದಲ್ಲಿ ಕಟ್ಟಕಡೆಯ ಬಡವರಿಗೂ ಶುದ್ಧ ಕುಡಿಯುವ ನೀರು ಒದಗಿಸಿದೆ. ಅಲ್ಲದೆ, ಕೊರೋನಾ ಸಂದರ್ಭದಲ್ಲಿ ಈ ಸಂಸ್ಥೆಯ ವೈದ್ಯರು, ಸಿಬ್ಬಂದಿಗಳು ಸ್ವಯಂ ಪ್ರೇರಣೆಯಿಂದ ಕೈಗೊಂಡ ಕಾರ್ಯ ಮೆಚ್ಚುಗೆಗೆ ಪಾತ್ರವಾಗಿದೆ ಎಂದು ಹೇಳಿದರು.

ಸೇವಾ ತಂಡದ ಮೂಲಕ ಲಕ್ಷಾಂತರ ಜನರಿಗೆ ಆರೋಗ್ಯ ತಪಾಸಣೆ, ಕಣ್ಣಿನ ತಪಾಸಣೆ ಹಾಗೂ ಶಸ್ತ್ರಚಿಕಿತ್ಸೆ, ಕನ್ನಡಕ ವಿತರಣೆ ಸೇರಿದಂತೆ ಗಂಭೀರ ಹೃದಯ ಕಾಯಿಲೆಗಳಿಗೂ ಬಡವರ ಮನೆ ಬಾಗಿಲಿಗೆ ಬಂದು ಸೇವೆ ಸಲ್ಲಿಸಿದ ಕೀರ್ತಿ ಈ ಸಂಸ್ಥೆಗೆ ಸಲ್ಲುತ್ತದೆ. ಇಂದು ಪರಿಣಿತ ವೈದ್ಯರ ತಂಡ ಸಮಾಜಕ್ಕೆ, ರೈತ ಕುಟುಂಬಕ್ಕೆ ಹೆಚ್ಚು ಜನರಿಗೆ ಅನುಕೂಲವಾದ ದೃಷ್ಟಿಯಿಂದ ಕೈಗೊಳ್ಳುತ್ತಿರುವ ರಚನಾತ್ಮಕ ಕಾರ್ಯ ವಿಶೇಷವಾಗಿದೆ ಎಂದರು.

ಜನಕಲ್ಯಾಣದ ದೃಷ್ಟಿಯಿಂದ ಒಂದು ಸರ್ಕಾರ ಮಾಡುವ ಕೆಲಸವನ್ನು ಈ ಸಂಸ್ಥೆ ಮಾಡುವ ಮೂಲಕ ಕೆ.ಹೆಚ್. ಪಾಟೀಲರ ಜನ್ಮ ಶತಮಾನೋತ್ಸವ ಕಾರ್ಯಕ್ರಮದ ಸಂದರ್ಭದಲ್ಲಿ ಎಲ್ಲ ಸಂಸ್ಥೆಗಳಿಗಿಂತ ಮಿಗಿಲಾಗಿ ರೂರಲ್ ಮೆಡಿಕಲ್ ಸರ್ವಿಸ್ ಸೊಸೈಟಿ ಕೈಗೊಂಡ ಕಾರ್ಯಗಳು ನೆರವೇರಿದ್ದು ನಮ್ಮೆಲ್ಲರಿಗೂ ಸಂತಸ ತಂದಿದೆ ಎಂದರು.

ಡಾ. ಎಸ್.ಆರ್. ನಾಗನೂರರ ಸೇವೆ ಅಪಾರ. ಇಂದು ರೂರಲ್ ಮೆಡಿಕಲ್ ಸರ್ವಿಸ್ ಸೊಸೈಟಿ ಹೆಮ್ಮರವಾಗಿ ಬೆಳೆಯಲು ಡಾ. ನಾಗನೂರರ ಕೊಡುಗೆ ಅಪಾರವಾಗಿದೆ. ಆ ನಿಟ್ಟಿನಲ್ಲಿ ಈ ಸಂಸ್ಥೆಯನ್ನು ಉಳಿಸಿ-ಬೆಳೆಸಲು ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿರುವ ಅವರಿಂದ ಇಂದು ಹೊಸ ಹೊಸ ಆವಿಷ್ಕಾರಗಳನ್ನು ಅನಾವರಣಗೊಳಿಸಲು ಸಾಧ್ಯವಾಗಿದೆ. ಅಲ್ಲದೆ ಈ ಸಂಸ್ಥೆಯ ಬೆಳವಣಿಗೆಗಾಗಿ ಹಗಲಿರುಳು ಎನ್ನದೆ ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಗ್ರಾಮಾಂತರ ಭಾಗದಲ್ಲಿ ವೈದ್ಯಕೀಯ ಶಿಕ್ಷಣ, ವಸತಿ ಸೇರಿದಂತೆ ಎಲ್ಲ ಬಗೆಯ ಸವಲತ್ತುಗಳನ್ನು ಜನರಿಗೆ ನೀಡುವ ನಿಟ್ಟಿನಲ್ಲಿ ಸಮಾನ ಮನಸ್ಕರ ಬಳಗವನ್ನು ಕಟ್ಟಿಕೊಂಡು ಕೆ.ಹೆಚ್. ಪಾಟೀಲರ ಕನಸು ನನಸಾಗಿಸುವ ನಿಟ್ಟಿನಲ್ಲಿ ಎಚ್.ಕೆ. ಪಾಟೀಲರು ಹಗಲು-ರಾತ್ರಿ ಎನ್ನದೆ ಶಕ್ತಿ ಮೀರಿ ಕೆಲಸ ಮಾಡುತ್ತಿದ್ದು, ಅವರು ಮಾಡುವ ಕೆಲಸ ಸಮಾಜದ ಬಡವರ ಸರ್ವಾಂಗೀನ ಅಭಿವೃದ್ಧಿಗೆ ನೆರವಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಡಾ. ವೇಮನ ಸಾಹುಕಾರ, ಡಾ. ಅರವಿಂದ ಪಾಟೀಲ, ಡಾ. ವಿನಾಯಕ, ಡಾ. ಸಿದ್ಧಾರ್ಥ, ಅಕ್ಬರ್‌ಸಾಬ್ ಬಬರ್ಚಿ, ಅಶೋಕ್ ಮಂದಾಲಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

## ತಹಸೀಲ್ದಾರ ಶ್ರೀನಿವಾಸ್ ಮೂರ್ತಿ ಕುಲಕರ್ಣಿಗೆ ರಾಜ್ಯ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ಪುಟ್ಟಣ್ಣ ಚೆಟ್ಟಿ ಟೌನ್ ಹಾಲ್ ನಲ್ಲಿ ಜರುಗಿದ ರಾಷ್ಟ್ರೀಯ ಮತದಾರ ದಿನಾಚರಣೆಯಲ್ಲಿ ರಾಜ್ಯಪಾಲರಾದ ತಾವರಚಂದ ಗೇಹ್ಲೋಟ್ ಅವರು ಗದಗ ತಾಲೂಕಿನ ತಹಸೀಲ್ದಾರ ಶ್ರೀ ನಿವಾಸಮೂರ್ತಿ ಕುಲಕರ್ಣಿ ಅವರಿಗೆ 2024-25ನೇ ಸಾಲಿನ ಅತ್ಯುತ್ತಮ ಚುನಾವಣಾ ಚಟುವಟಿಕೆಗಳ ರಾಜ್ಯ ಪ್ರಶಸ್ತಿಯನ್ನು ನೀಡಿದರು.

ಈ ಸಂದರ್ಭದಲ್ಲಿ ಬಿ.ಬಿ.ಎಂ.ಪಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್, ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ಉಪಸ್ಥಿತರಿದ್ದರು.

## ಜಿಲ್ಲಾಡಳಿತ ಭವನದಲ್ಲಿ ಗಣರಾಜ್ಯೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದಲ್ಲಿ 76ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ರವಿವಾರ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಧ್ವಜಾರೋಹಣ ನೆರವೇರಿಸಿದರು.

ನಂತರ ಮಾತನಾಡಿದ ಅವರು, ರಾಜ್ಯದಲ್ಲಿ 7ಕೋಟಿ ಸಾರ್ವಜನಿಕರಿದ್ದು, ಇದರಲ್ಲಿ 5 ರಿಂದ 6 ಲಕ್ಷ ಜನಕ್ಕೆ ಮಾತ್ರ ಸರ್ಕಾರಿ ನೌಕರಿ ದೊರೆ-ಯುತ್ತದೆ. ನಾವೆಲ್ಲ ಸಾರ್ವಜನಿಕರ ಸೇವೆಯಲ್ಲಿ ನಿರಂತರವಾಗಿ ಕಾರ್ಯ ನಿರ್ವಹಿಸುವರಾಗಿದ್ದು ಸರ್ಕಾರದ ಹಾಗೂ ಸಂವಿಧಾನದ ಆಶಯ ಈಡೇರಿಕೆಗೆ ಶ್ರಮಿಸೋಣ ಎಂದರು.



ಸಂವಿಧಾನದ ಅಡಿಯಲ್ಲಿ ನಾವೆಲ್ಲ ಸೇವೆ ಸಲ್ಲಿಸಬೇಕು. ಸಾರ್ವಜನಿಕರಿಗೆ ಸೌಲಭ್ಯ ಕಲ್ಪಿಸುವುದು ನಮ್ಮ ಧ್ಯೇಯವಾಗಿರಬೇಕು. ಗಡಿಯಲ್ಲಿನ ಸೇನೆಯಲ್ಲಿ ಸೇವೆ ಮಾಡುವಂತೆ ನಾವೂ ಸಹ ಸಾರ್ವಜನಿಕರ ಸೇವೆಯಲ್ಲಿ ತೊಡಗಿಕೊಳ್ಳೋಣ. ಸಾರ್ವಜನಿಕರ ಕೆಲಸ ಮಾಡುವ ಮೂಲಕ ಖುಷಿ ಪಡುವ ಮನೋಭಾವ ಬೆಳೆಸಿಕೊಳ್ಳೋಣ ಎಂದರು.

ಭಾರತ ದೇಶದ ಸಂವಿಧಾನ ರಚನೆಯ ಹಿಂದೆ ತುಂಬ ಶ್ರಮವಿದ್ದು ಇದನ್ನು ಪ್ರತಿಯೊಬ್ಬರು ಪಾಲಿಸುವ ಮೂಲಕ ಸಂವಿಧಾನಕ್ಕೆ ಗೌರವ ಸಲ್ಲಿಸುವಂತೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ., ಉಪವಿಭಾಗಾಧಿಕಾರಿ ಗಂಗಪ್ಪ ಎಂ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಹಾಜರಿದ್ದರು.

## ರಾಜಪ್ರಭುತ್ವ ಕೊನೆಯಾಗಿಸಿ ಪ್ರಜಾಪ್ರಭುತ್ವ ನೀಡಿದವರು ಅಂಬೇಡ್ಕರ್

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸ್ವಾತಂತ್ರ್ಯ ನಂತರ ಭಾರತ ಹಲವು ಗಣಗಳಾಗಿ ವಿಂಗಡಣೆಯಾಗಿದ್ದವು.

ದೇಶಕ್ಕೆ ರಾಜಪ್ರಭುತ್ವ ಕಿತ್ತು ಹಾಕುವ ಸದೃಢ ಕಾನೂನಿನ ಜೊತೆಗೆ ಪ್ರಜೆಗಳಿಗೆ ತನ್ನ ನಾಯಕನನ್ನು ಆಯ್ಕೆ ಮಾಡುವ ಹಕ್ಕನ್ನು ನೀಡಿದ ದಿನವಾಗಿದೆ ಎಂದು ಅಂಜುಮನ್ ಎ ಇಸ್ಲಾಂ ಸಂಸ್ಥೆಯ ಅಧ್ಯಕ್ಷ ತಾಜುದ್ದೀನ ಕಿಂಡ್ರಿ ಹೇಳಿದರು.

ಅವರು ಪಟ್ಟಣದ ಅಂಜುಮನ್ ಎ ಇಸ್ಲಾಂ ಸಂಸ್ಥೆಯ ಪೂರ್ವ ಪ್ರಾಥಮಿಕ/ಪ್ರಾಥಮಿಕ ಶಾಲೆಯಲ್ಲಿ ಏರ್ಪಡಿಸಿದ್ದ 76ನೇ ಗಣರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.



ಗಣರಾಜ್ಯೋತ್ಸವ ಎಂಬ ಅಭೂತಪೂರ್ವ ದಿನವನ್ನು ಒದಗಿಸಿದ್ದು ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರು ಎಂದು ತಾಜುದ್ದೀನ ಕಿಂಡ್ರಿ ಹೇಳಿದರು.

ಈ ಮೂಲಕ ಜನವರಿ 26ನೇ ದಿನವನ್ನು ಸಂವಿಧಾನವನ್ನು ನಮಗೆ ನಾವೇ ಅರ್ಪಿಸಿಕೊಂಡ ದಿನವಾಗಿದೆ ಎಂದು ಅವರು ವಿವರಿಸಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಎ ಡಿ ಮುಜಾವರ, ದಾವಲಸಾಬ ಲಕ್ಷ್ಮೇಶ್ವರ, ಮುನ್ನಾ ಢಾಲಾಯತ, ಇಸ್ಮಾಯಿಲ್ ಖಾಜಿ, ರಫೀಕ್ ದಲೀಲ, ಅಲ್ಲಾಭಕ್ಷಿ ಹೊಂಬಳ, ಹಿರಿಯರಾದ ಹಸನಸಾಬ ಶೇಖ, ಸೈಯದ್ ಅಲಿ ಶೇಖ, ಮನ್ಸೂರ ಹಣಗಿ, ಸೈಯದ್ ಅಲಿ ಶೇಖ(ಚವಳಿಕಾಯಿ), ಹುಸೇನ ಅಕ್ಕಿ, ವೀರೇಂದ್ರ ಹುಲಿ, ದಾವೂದ ಜಮಾಲ್ ಹಾಗೂ ಶಾಲಾ ಶಿಕ್ಷಕರು ಹಾಗೂ ಮಕ್ಕಳು ಇದ್ದರು.

## ಸಂಗೊಳ್ಳಿ ರಾಯಣ್ಣನ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದ ಸಚಿವ ಎಚ್.ಕೆ.ಪಾಟೀಲ

■ವಿಜಯಸಾಕ್ಷಿ ಸುದ್ದಿ, ಗದಗ



ಹುತಾತ್ಮರ ದಿನಾಚರಣೆ ಅಂಗವಾಗಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರಕ್ಕೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಜಿಲ್ಲಾಡಳಿತ ಭವನದ ಅಡಿಟೋರಿಯಂ ಹಾಲ್‌ನಲ್ಲಿ ರವಿವಾರದಂದು ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಭರತ್ ಎಸ್, ಪೊಲೀಸ್ ವರಿಷ್ಠಾಧಿಕಾರಿ ಬಿ ಎಸ್ ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಎ.ಸಿ ಗಂಗಪ್ಪ ಗಣ್ಯರಾದ ವಾಸಣ್ಣ ಕುರಡಗಿ, ಬಿ.ಬಿ.ಅಸೂಟಿ, ಅಶೋಕ ಮಂದಾಲಿ, ಬಸವರಾಜ್ ಕಡೇಮನಿ ಹಾಜರಿದ್ದರು.

## ವಿಡಿಎಸ್ ಕ್ಲಾಸಿಕ್ ಶಾಲೆಯಲ್ಲಿ ಗಣರಾಜ್ಯೋತ್ಸವ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶತಮಾನ ಪೂರೈಸಿದ ಹಾಗೂ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ವಿದ್ಯಾದಾನ ಸಮಿತಿ ಕ್ಲಾಸಿಕ್ ಸಿಬಿಎಸ್‌ಇ ಶಾಲೆಯಲ್ಲಿ 76ನೇ ಗಣರಾಜ್ಯೋತ್ಸವನ್ನು ಆಚರಿಸಲಾಯಿತು. ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಆಡಳಿತಾಧಿಕಾರಿ ಡಾ. ಗಂಗೂಬಾಯಿ ಪವಾರ, ಶಾಲೆಯ ಪ್ರಾಚಾರ್ಯ ಎಂ.ಆರ್. ಡೊಳ್ಳಿನ, ಉಪ ಪ್ರಾಚಾರ್ಯ ಅಕ್ಷಯ್ ಜಿ ಅವರು ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಶಾಲೆಯ ಆಡಳಿತಾಧಿಕಾರಿ ಡಾ. ಗಂಗೂಬಾಯಿ ಪವಾರ, ಪ್ರಾಚಾರ್ಯ ಎಂ.ಆರ್.



ಡೊಳ್ಳಿನ, ಉಪ ಪ್ರಾಚಾರ್ಯ ಅಕ್ಷಯ್ ಜಿ ಸರ್ವರಿಗೂ ಗಣರಾಜ್ಯೋತ್ಸವದ ಶುಭಾಶಯ ತಿಳಿಸಿದರು. ವೇದಿಕೆಯಲ್ಲಿ ಶಾಲಾ ಪ್ರಧಾನಿ ಅರ್ಪಿತಾ ನಿಕ್ಕಂ ಉಪಸ್ಥಿತರಿದ್ದರು.

ಶಿಕ್ಷಕಿ ಗಾಯತ್ರಿ ಅಸುಂಡಿ, ವಿದ್ಯಾರ್ಥಿಗಳಾದ ಮಹಮ್ಮದ್ ಫಾರ್ಹನ್ ಖಾಜಿ, ಅನನ್ಯ ಬಿದರಕುಂದಿ, ಕೆ.ಎನ್. ಕಾವ್ಯಾಶ್ರೀ, ಸಿಂಚನಾ ಬ್ಯಾಳಿ ಅನಿಸಿಕೆ ವ್ಯಕ್ತಪಡಿಸಿದರು. ಸಂಜನಾ ಆರಟ್ಟಿ ಹಾಗೂ ಸಂಗಡಿಗರು ದೇಶಭಕ್ತಿಗೀತೆಯನ್ನು ಹಾಡಿದರು. ಆರಾಧ್ಯ ಅಬ್ಬಿಗೇರಿಮಠ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಎ.ಎಚ್. ಬಾಗಲಕೋಟೆ ಸ್ವಾಗತಿಸಿದರು. ಶಿಕ್ಷಕಿ ಸಭಾ ಉಮಚಗಿ ನಿರೂಪಿಸಿದರು, ರೇಣುಕಾ ವೆಂಕಟಾಪುರ ವಂದಿಸಿದರು.


**76ನೇ ಗಣರಾಜ್ಯೋತ್ಸವ ದಿನಾಚರಣೆ**

## ಗಮನ ಸೆಳೆದ ಪಥ ಸಂಚಲನ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ರವಿವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲರು 76ನೇ ಗಣರಾಜ್ಯೋತ್ಸವ ದಿನಾಚರಣೆಯ ಅಂಗವಾಗಿ ಸಾರ್ವಜನಿಕ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ವಿವಿಧ ದಳಗಳ ವೀಕ್ಷಣೆ ಮಾಡಿದರು.

ಆಕರ್ಷಕ ಪಥಸಂಚಲನದ ನೇತೃತ್ವವನ್ನು ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಪರೇಡ್ ಕಮಾಂಡರ್ ಶಂಕರಗೌಡ ಚೌದ್ರಿ ವಹಿಸಿದ್ದರು. ಜಿಲ್ಲಾ ಸಶಸ್ತ್ರ ಮೀಸಲು



ಪೊಲೀಸ್ ಪಡೆಯ ನೇತೃತ್ವವನ್ನು ವಿಜಯಕುಮಾರ್ ಜಿ ವಹಿಸಿದ್ದರು. ನಾಗರಿಕ ಪೊಲೀಸ್ ಪಡೆಯ ನೇತೃತ್ವವನ್ನು ಗದಗ ಗ್ರಾಮೀಣ ಘಟಕದ ಪಿಎಸ್‌ಐ ಕಿರಣಕುಮಾರ್, ಗೃಹ ರಕ್ಷಕ ದಳದ ನೇತೃತ್ವವನ್ನು ಎಂ.ಎನ್. ವಸ್ತ್ರದ, ಅಬಕಾರಿ ದಳದ ನೇತೃತ್ವವನ್ನು ವಿಜಯಲಕ್ಷ್ಮೀ, ಅಗ್ನಿಶಾಮಕ ಪಡೆಯ ನೇತೃತ್ವವನ್ನು ಲೋಕೇಶ ಜಿ.ಕೆ, ಅರಣ್ಯ ರಕ್ಷಕ ಪಡೆಯ ನೇತೃತ್ವವನ್ನು ಡೆಪ್ಯೂಟಿ ಆರ್.ಎಫ್.ಓ ಸಚಿನ್ ಬಿಸನಳ್ಳಿ, ಎನ್.ಸಿ.ಸಿ. ಬಾಯ್ಸ್ ದಳದ ನೇತೃತ್ವವನ್ನು ಹುಲಕೋಟಿಯ ರಾಜರಾಜೇಶ್ವರಿ ಪ್ರೌಢಶಾಲೆಯ ರಿಯಾನ್ ಅಹ್ಮದ್, ಸಾಮಾನ್ಯ ವಿಭಾಗದ ನೇತೃತ್ವವನ್ನು ವಿ.ಡಿ.ಎಸ್.ಟಿ.ಸಿ. ಬಾಲಕಿಯರ ಪ್ರೌಢಶಾಲೆಯ ನೀಲಮ್ಮ, ಭಾರತ ಸೇವಾದಳದ ನೇತೃತ್ವವನ್ನು ಎಸ್. ಎಂ. ಕೃಷ್ಣಾ ನಗರದ ಸರ್ಕಾರಿ ಹಿರಿಯ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆಯ ಸ್ನೇಹಾ, ಬೆಟಗೇರಿಯ ಸೇಂಟ್‌ಜಾನ್ ಪ್ರೌಢಶಾಲೆಯ ಸಾಮಾನ್ಯ ವಿಭಾಗದ ನೇತೃತ್ವವನ್ನು ಸೋಮಶೇಖರ, ಮಾಜಿ ಸೈನಿಕರ ತಂಡದ ನೇತೃತ್ವವನ್ನು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಬಸಲಿಂಗಪ್ಪ ಮುಂಡರಗಿ, ಎನ್.ಸಿ.ಸಿ.ಗರ್ಲ್ಸ್ ತಂಡದ ನೇತೃತ್ವವನ್ನು ನಗರದ ಸಿ.ಎಸ್. ಪಾಟೀಲ ಪ್ರೌಢಶಾಲೆಯ ದಿವ್ಯಾ, ಶಾಲೆಯ ಸ್ಕೌಟ್ಸ್ ವಿಭಾಗದ ನೇತೃತ್ವನ್ನು ನಗರದ ಕೆ.ಎಲ್.ಇ. ಸಿ.ಬಿ.ಎಸ್.ಇ ಪ್ರಾಥಮಿಕ ಸಾಯಿ ಸಮರ್ಥ, ಸೇವಾದಳದ ನೇತೃತ್ವವನ್ನು ಎಸ್.ಎಂ. ಕೃಷ್ಣಾ ನಗರದ ಸರಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆಯ ಚೈತ್ರಾ, ಸಾಮಾನ್ಯ ತಂಡದ ನೇತೃತ್ವವನ್ನು ನಗರದ ಸಿ.ಎಸ್. ಪಾಟೀಲ ಬಾಲಕಿಯರ ಪ್ರೌಢಶಾಲೆಯ ರಜಿಯಾಬೇಗಂ, ಕೆ.ಎಸ್.ಆರ್.ಟಿ.ಸಿ ನೇತೃತ್ವವವನ್ನು ಹುಬ್ಬಳ್ಳಿಯ ವಾ.ಕ.ರ.ಸಾ. ಭದ್ರತಾ ಹಾಗೂ ಜಾಗೃತದಳದ ಎನ್.ಕೆ. ಲಮಾಣಿ ವಹಿಸಿದ್ದರು. ಪಥ ಸಂಚಲನದಲ್ಲಿ ಪಾಲ್ಗೊಂಡು ಉತ್ತಮ ಪ್ರದರ್ಶನ ನೀಡಿದ ತಂಡಗಳಿಗೆ ಸಚಿವರು ಸನ್ಮಾನಿಸಿದರು.

76ನೇ ಗಣರಾಜ್ಯೋತ್ಸವ ದಿನಾಚರಣೆಯ ಅಂಗವಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಸಮಾರಂಭ

# ಸಾಧಕರಿಗೆ ಜಿಲ್ಲಾಡಳಿತದಿಂದ ಸನ್ಮಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

76ನೇ ಗಣರಾಜ್ಯೋತ್ಸವ ದಿನಾಚರಣೆಯ ಅಂಗವಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ಗುರುತಿಸಿ ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸೇರಿದಂತೆ ಗಣ್ಯರು ಸನ್ಮಾನ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ಸಾಂಸ್ಕೃತಿಕ, ಜಾನಪದ, ಶಿಲ್ಪಕಲೆ, ವೈದ್ಯಕೀಯ ಮತ್ತು ಆಡಳಿತ ಕ್ಷೇತ್ರ: 2024ರ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿದ್ದಕ್ಕಾಗಿ ನಗರದ ರೇಣುಕಾ ಹಾಸ್ಪಿಟಲ್‌ನ ಡಾ. ಜಿ.ಬಿ. ಬೀಡನಾಳ, 2024ರ ಸುವರ್ಣ ಸಂಭ್ರಮ-50ರ ಪ್ರಶಸ್ತಿಗೆ ಭಾಜನರಾಗಿದ್ದಕ್ಕಾಗಿ ಜಿಲ್ಲೆಯ ಕಳಸಾಪುರದ ಸುರೇಶ ಠಾಕರಪ್ಪ ಲಮಾಣಿ, ಕರ್ನಾಟಕ ಶಿಲ್ಪಕಲಾ ಅಕಾಡೆಮಿಯಿಂದ ಕೊಡಮಾಡುವ 2022ರ ವಾರ್ಷಿಕ ಪ್ರಶಸ್ತಿಗೆ ಭಾಜನರಾಗಿದ್ದಕ್ಕಾಗಿ ಲಕ್ಕುಂಡಿಯ ವೀರಭದ್ರಪ್ಪ ಕಾಳಪ್ಪ ಕವಲೂರು, ಮಲ್ಲಿಕಾರ್ಜುನ ಮನ್ಸೂರ ಟ್ರಸ್ಟ್ ಧಾರವಾಡ ವತಿಯಿಂದ ರಾಷ್ಟ್ರೀಯ ಯುವ ಪ್ರಶಸ್ತಿ ಪಡೆದಿದ್ದಕ್ಕಾಗಿ ಕೆ.ಕೆ.ಪಿ.ಪಿ.ಜಿ ಸಂಗೀತ ಮಹಾವಿದ್ಯಾಲಯದ ಪಂ.ವೆಂಕಟೇಶ ಅಲ್ಕೋಡ, ಸಂಗೀತ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಕ್ಕಾಗಿ ಖ್ಯಾತ ವಯೋಲಿನ್ ವಾದಕರಾದ ನಾರಾಯಣ ಹಿರೇಕೊಳಜಿ, ಸರ್ಕಾರಿ ಸೇವೆಯಲ್ಲಿ ಉತ್ತಮ ಕಾರ್ಯನಿರ್ವಹಣೆಗಾಗಿ ಎಚ್. ಆರ್. ಪಾಟೀಲ, ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ಸಿಬ್ಬಂದಿಗಳ ಮೇಲ್ವಿಚಾರಕರಾಗಿ ಉತ್ತಮ ಸೇವೆ ಸಲ್ಲಿಸಿದ್ದಕ್ಕಾಗಿ ನಗರದ ಜಿಲ್ಲಾ ಆಸ್ಪತ್ರೆಯ ಮಲ್ಲಪ್ಪ ಭಾವಿಮನಿ ಅವರನ್ನು ಸನ್ಮಾನಿಸಲಾಯಿತು.

ಮಾಧ್ಯಮ ವಿಭಾಗ: ಮಾಧ್ಯಮ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿದಕ್ಕಾಗಿ ಕಿತ್ತೂರ ಕರ್ನಾಟಕ ದಿನಪತ್ರಿಕೆಯ ವರದಿಗಾರ ಹಾಗೂ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ, ವಿಜಯವಾಣಿ ದಿನಪತ್ರಿಕೆಯ ಜಿಲ್ಲಾ ವರದಿಗಾರ ಶಿವಾನಂದ ಹಿರೇಮಠ, ಇಂಡಿಯನ್ ಎಕ್ಸ್‌ಪ್ರೆಸ್ ದಿನಪತ್ರಿಕೆಯ ವರದಿಗಾರರಾದ ರಘೋತ್ತಮ ಕೊಪ್ಪರ, ಪ್ರಜಾ ಟಿವಿ ಜಿಲ್ಲಾ ವರದಿಗಾರ ಶರಣು ದೊಡ್ಡೂರು, ಸುವರ್ಣ ಟಿವಿ ಕ್ಯಾಮರಾಮನ್ ಲಿಂಗರಾಜ್ ಎಂ.ಆರ್., ನವೋದಯ ದಿನಪತ್ರಿಕೆಯ ವರದಿಗಾರ ಹನುಮಾನ್ ಸಿಂಗ್ ಜಮಾದಾರ, ರೋಣ ತಾಲೂಕಿನ ವಿಜಯವಾಣಿ ದಿನಪತ್ರಿಕೆಯ ವರದಿಗಾರ ಬಸವರಾಜ ಪಟ್ಟಣಶೆಟ್ಟಿ, ನರಗುಂದ ತಾಲೂಕಿನ ವಿಜಯ ಕರ್ನಾಟಕ ದಿನಪತ್ರಿಕೆಯ ವರದಿಗಾರ ಸಿ.ಬಿ. ಸುಬೇದಾರ, ಲಕ್ಷ್ಮೇಶ್ವರ ತಾಲೂಕಿನ ಪ್ರಜಾವಾಣಿ ದಿನಪತ್ರಿಕೆಯ ವರದಿಗಾರ ನಾಗರಾಜ ಹಣಗಿ, ಮುಂಡರಗಿ ತಾಲೂಕಿನ ನಾಗರಿಕ ದಿನಪತ್ರಿಕೆ ವರದಿಗಾರ ಕವಿ ಬಂಕಾಪುರ, ಶಿರಹಟ್ಟಿ ತಾಲೂಕಿನ ಉದಯವಾಣಿ ವರದಿಗಾರ ಜಿ.ಬಿ. ಹೆಸರೂರ, ಮುಳಗುಂದದ ನವೋದಯ ದಿನಪತ್ರಿಕೆಯ ವರದಿಗಾರ ಮಹೇಶ ನೀಲಗುಂದ, ಗಜೇಂದ್ರಗಡ ತಾಲೂಕಿನ ಕನ್ನಡಪ್ರಭ ದಿನಪತ್ರಿಕೆಯ ವರದಿಗಾರ ಎಸ್.ಎಂ. ಸೈಯದ್ ಅವರನ್ನು ಸನ್ಮಾನಿಸಲಾಯಿತು.



ಶಿಕ್ಷಣ, ಸ್ಪರ್ಧೆ ಮತ್ತು ಸಾಮಾಜಿಕ ಕ್ಷೇತ್ರ: ಸಾಮಾಜಿಕ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದಕ್ಕಾಗಿ ಲಕ್ಷ್ಮೇಶ್ವರದ ಕರಿಯಪ್ಪ ನೀಲಪ್ಪ ಶಿರಹಟ್ಟಿ, ಶೈಕ್ಷಣಿಕ ಕ್ಷೇತ್ರದಲ್ಲಿ ಹುಲಕೋಟಿಯ ರಾಜೇಶ್ವರ ವಿದ್ಯಾನಿಕೇತನ ಸಂಸ್ಥೆಯ ರಾಘವೇಂದ್ರ ಶೆಟ್ಟಿ, ಸಾರ್ವಜನಿಕ ಗ್ರಂಥಾಲಯ ಇಲಾಖೆ ಬೆಂಗಳೂರು ಇವರಿಂದ ರಾಷ್ಟ್ರೀಯ ಗ್ರಂಥಾಲಯ, ಸಪ್ತಾಹ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪಡೆದಿದ್ದಕ್ಕಾಗಿ ಭಗವಂತಪ್ಪ ತಾರಿಕೊಪ್ಪ, ಬೆಂಗಳೂರಿನಲ್ಲಿ ನಡೆದ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮದಲ್ಲಿ ರಾಜ್ಯ ಪ್ರಶಸ್ತಿ ಪಡೆದ ವಿಜಯ ಕುಮಾರ್ ಎಚ್.ಬಣಕಾರ, ಮಹಿಳಾ ಮತ್ತು ಮಕ್ಕಳ ಇಲಾಖೆ ಹಾಗೂ ಬಾಲ ಭವನ ಸೊಸೈಟಿ ಇವರುಗಳ ಸಹಯೋಗದಲ್ಲಿ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಶಾಸ್ತ್ರೀಯ ಸಂಗೀತ ಸ್ಪರ್ಧೆಯಲ್ಲಿ ಕಲಾಶ್ರೀ ಪ್ರಶಸ್ತಿ ಪಡೆದಿದ್ದಕ್ಕಾಗಿ ಕೃಷ್ಣಪ್ರಿಯಾ ಆನಂದ ಬದಿ, ಎನ್.ಸಿ.ಸಿ ಕ್ಯಾಡೆಟ್ ವಿಭಾಗದಲ್ಲಿ ಉತ್ತಮ ಸಾಧನೆ ಮಾಡಿದ್ದಕ್ಕಾಗಿ ಹನುಮಂತರಾವ್ ಕುಲಕರ್ಣಿ ಅವರನ್ನು ಸನ್ಮಾನಿಸಲಾಯಿತು.

ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ವಿಜೇತರಾದ ಕ್ರೀಡಾಪಟುಗಳ ವಿವರ: ರಾಜ್ಯಮಟ್ಟದ ಅಥ್ಲೆಟಿಕ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಕ್ಕಾಗಿ ಆಶಿಫ್ ಶೇಖಸಾಬ ನದಾಫ್, ರಾಜ್ಯಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಕ್ಕಾಗಿ ಶಾಹೀನ ಗುಲಾಂ ಸಾಬ ನದಾಫ್, ರಾಜ್ಯಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಕ್ಕಾಗಿ ಮಹಮ್ಮದ ರಫೀಕ್ ಎನ್.ರೇವಡಿಗಾರ, ಅಂತಾರಾಷ್ಟ್ರೀಯ ಕುಸ್ತಿ ಸ್ಪರ್ಧೆಯಲ್ಲಿ ಪ್ರಶಸ್ತಿಗೆ ಭಾಜನರಾಗಿದ್ದಕ್ಕಾಗಿ ಮುತ್ತು ರಮೇಶ ಭಾವಿ, ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮದ ಚಿತ್ರಕಲಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ವಿನುತ ಅಕ್ಕಸಾಲಿಗ, ರಾಷ್ಟ್ರಮಟ್ಟದ ಯೋಗಾಸನ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಕ್ಕಾಗಿ ನಿರೀಕ್ಷಿತಾ ಡೊಳ್ಳಿನ, 29ನೇ ರಾಷ್ಟ್ರೀಯ ರೋಡ್ ಸ್ಕೈಕ್ಲಿಂಗ್ ಚಾಂಪಿಯನ್ ಶಿಪ್‌ನಲ್ಲಿ ಪ್ರಥಮ ಸ್ಥಾನ ಪಡೆದಿದ್ದಕ್ಕಾಗಿ ನಿಖಿಲರೆಡ್ಡಿ ತೇರಿನಗಡ್ಡಿ, ರಾಜ್ಯ ಮಟ್ಟದ ಸ್ಕೂಲ್ ಗೇಮ್‌ನಲ್ಲಿ ಪ್ರಥಮ ಸ್ಥಾನ ಪಡೆದಿದ್ದಕ್ಕಾಗಿ ಚಿನ್ಮಯ ಎಸ್.ಕಪ್ಪತನವರ ಅವರನ್ನು ಸನ್ಮಾನಿಸಲಾಯಿತು.

## ಉಪಸ್ಥಿತಿ

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕೆಂಚಪ್ಪನವರ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರುಗಳು, ಸಾರ್ವಜನಿಕರು, ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಲ್ಲಿನಲ್ಲಿ ಅರಳಿದ ಲಕ್ಕುಂಡಿ ಶಿಲ್ಪಕಲೆ

▶▶ ಮೊದಲನೇ ಪುಟದಿಂದ



10 ಜನ ಕಲಾವಿದರು ಸ್ತಬ್ಧಚಿತ್ರದ ಮೇಲುಭಾಗದಲ್ಲಿ ಪ್ರವಾಸಿಗರಾಗಿ ಗಮನಸೆಳೆದರು. ಕರ್ನಾಟಕದ ಗದಗ ಜಿಲ್ಲೆಯಲ್ಲಿರುವ ಲಕ್ಕುಂಡಿಯನ್ನು ಅದರ ಅದ್ಭುತ ಕಲ್ಲಿನ ವಾಸ್ತುಶಿಲ್ಪಕ್ಕಾಗಿ 'ಶಿಲ್ಪಕಲೆಯ ತೊಟ್ಟಿಲು' ಎಂದು ಕರೆಯಲಾಗುತ್ತದೆ. ಇಲ್ಲಿನ ಸುಂದರವಾದ ದೇವಾಲಯಗಳು, ಮೆಟ್ಟಿಲು ಬಾವಿಗಳು ಮತ್ತು ಚಾಲುಕ್ಯ ರಾಜವಂಶದ ಶಾಸನಗಳಿಗೆ ನೆಲೆಯಾಗಿದೆ. ಸಾಂಸ್ಕೃತಿಕ ಶಕ್ತಿ ಕೇಂದ್ರವಾಗಿರುವುದರ ಜೊತೆಗೆ, 10ರಿಂದ 12ನೇ ಶತಮಾನದ ನಡುವೆ ಲಕ್ಕುಂಡಿ ಒಂದು ದೊಡ್ಡ ವಾಣಿಜ್ಯ ಕೇಂದ್ರವಾಗಿತ್ತು. ಈ ನಗರವು ಹಲವಾರು ರಾಜವಂಶಗಳಿಂದ ಆಳಲ್ಪಟ್ಟಿತ್ತಾದರೂ ಅವುಗಳಲ್ಲಿ ಅತ್ಯಂತ ಪ್ರಮುಖವಾದದ್ದು ಚಾಲುಕ್ಯರ ರಾಜವಂಶ.

ಲಕ್ಕುಂಡಿಯು ಪ್ರಾಚೀನಾನ್ವೇಷಕರು ಮತ್ತು ವಾಸ್ತುಶಿಲ್ಪ ಪ್ರಿಯರ ಸ್ವರ್ಗವಾಗಿದೆ. ಇದು 50 ದೇವಾಲಯಗಳನ್ನು ಹೊಂದಿದ್ದು, ಅವುಗಳಲ್ಲಿ ಹೆಚ್ಚಿನವು ಶಿವನಿಗೆ ಸಮರ್ಪಿತವಾಗಿವೆ; 101 ಮೆಟ್ಟಿಲು ಬಾವಿಗಳು (ಕಲ್ಯಾಣಿ / ಪುಷ್ಕರಣಿ); ಮತ್ತು 29 ಶಾಸನಗಳು ಇಲ್ಲಿವೆ. ಇವುಗಳು ಕಲ್ಯಾಣಿ ಚಾಲುಕ್ಯರ ಕಲೆ, ಸಂಸ್ಕೃತಿ ಮತ್ತು ವಾಸ್ತುಶಿಲ್ಪದ ಶ್ರೇಷ್ಠತೆಯ ಸಂಕೇತವಾಗಿದೆ. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ನಿರ್ವಹಿಸುತ್ತಿರುವ ವಸ್ತುಸಂಗ್ರಹಾಲಯವು ಲಕ್ಕುಂಡಿಯ ಶ್ರೀಮಂತ ಶಿಲ್ಪಕಲೆಯನ್ನು ಪ್ರದರ್ಶಿಸಿತು. 2022ರ ಇಲಾಖೆಯು ಪ್ರದರ್ಶಿಸಿದ್ದ - ಸಾಂಪ್ರದಾಯಿಕ ಕಸೂತಿ ತೊಟ್ಟಿಲುಗೆ ದ್ವಿತೀಯ ಪ್ರಶಸ್ತಿ, 2015ರಲ್ಲಿ ರಾಜ್ಯವು ಚನ್ನಪಟ್ಟದ ಗೊಂಬೆಗಳಿಗೆ ತೃತೀಯ, 2012ರಲ್ಲಿ ದಕ್ಷಿಣ ಕನ್ನಡ ಭೂತಾರಾಧನೆಗೆ ತೃತೀಯ, 2011ರಲ್ಲಿ ಬೀದರನ ಪಾರಂಪರಿಕ ಕಲೆಯಾದ 'ಬಿದರಿ' ಸ್ತಬ್ಧಚಿತ್ರಕ್ಕೆ ದ್ವಿತೀಯ ಮತ್ತು 2008ರಲ್ಲಿ ಹೋಯ್ಸಳ ವಾಸ್ತುಶಿಲ್ಪಕ್ಕೆ ದ್ವಿತೀಯ ಪ್ರಶಸ್ತಿ ಸಂದಿತ್ತು. 2005ರಲ್ಲಿ ವೈರಾಗ್ಯ ಮೂರ್ತಿ ಬಾಹುಬಲಿಯ ಮಹಾಮಸ್ತಕಾಭಿಷೇಕದ ಸ್ತಬ್ಧಚಿತ್ರಕ್ಕೆ ಪ್ರಥಮ ಪ್ರಶಸ್ತಿ ದೊರೆತಿತ್ತು. 2008ರಲ್ಲಿ ಹೊಯ್ಸಳ ಕಲೆಯ ಸ್ತಬ್ಧಚಿತ್ರವು ದ್ವಿತೀಯ ಪ್ರಶಸ್ತಿಯ ಜೊತೆ-ಗೆ ಅತ್ಯುತ್ತಮ ನಿರೂಪಣೆ ಮತ್ತು ಅತ್ಯುತ್ತಮ ಫ್ಯಾಬ್ರಿಕೇಷನ್ನಾಗಿ ಪ್ರಶಸ್ತಿ ಲಭಿಸಿತ್ತು. ಒಂದೇ ಸ್ತಬ್ಧಚಿತ್ರಕ್ಕಾಗಿ ಮೂರು ಪ್ರಶಸ್ತಿಗಳನ್ನು ಪಡೆದಂತಹ ಅಪರೂಪದ ಸಾಧನೆಯನ್ನು ನಮ್ಮ ರಾಜ್ಯವು ಮಾಡಿದೆ ಎನ್ನುವುದು ಹೆಮ್ಮೆಯ ಸಂಗತಿಯಾಗಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರ ಉಸ್ತುವಾರಿಯಲ್ಲಿ ಅಂತಾರಾಷ್ಟ್ರೀಯ ಖ್ಯಾತಿಯ ಕಲಾ ನಿರ್ದೇಶಕ ಶಶಿಧರ ಅಡಪ ಅವರು ಕಲಾ ನಿರ್ದೇಶನ ಮಾಡಿದ್ದಾರೆ. ಸಂಗೀತ ನಿರ್ದೇಶಕ ಪ್ರವೀಣ್ ಡಿ.ರಾವ್ ಅವರ ಕನ್ನಡ ಸಾಹಿತ್ಯ ಇರುವ ಸುಮಧುರವಾದ ಸಂಗೀತ ಕರ್ತವ್ಯಪಥದಲ್ಲಿ ನಿನಾದಿಸಿ ಕೇಳುಗರ ಮನಸೂರಗೊಂಡಿತು.

ಮೈಸೂರು, ಬೆಂಗಳೂರು, ಗದಗ ಮತ್ತು ಧಾರವಾಡದಿಂದ ಆಗಮಿಸಿದ 18 ಜನ ಕಲಾವಿದರಿರುವ ಸ್ತಬ್ಧಚಿತ್ರದ ಇಕ್ಕೆಲಗಳಲ್ಲಿ ತಲಾ ನಾಲ್ಕು ಮಂದಿ ಮಹಿಳೆಯರು ಮತ್ತು ಪುರುಷರು ಜಗ್ಗಲಿಗೆ ಬಾರಿಸುತ್ತಾ, ಸಾಂಪ್ರದಾಯಿಕ ಉಡುಪಿನಲ್ಲಿ ಕರ್ತವ್ಯಪಥದಲ್ಲಿ ಕಂಗೊಳಿಸಿದರು.

# ಧಾರ್ಮಿಕ ಪಠಣದಲ್ಲಿ ದ್ವಿತೀಯ ಸ್ಥಾನ

**■ ವಿಜಯಸಾಕ್ಷಿ ಸುದ್ದಿ, ಗದಗ**



ನಗರದ ಲೊಯೊಲಾ ಪ್ರೌಢಶಾಲೆಯಲ್ಲಿ ಜಿಲ್ಲಾ ಪಂಚಾಯತ ಹಾಗೂ ಶಾಲಾ ಶಿಕ್ಷಣ ಇಲಾಖೆ ಗದಗ ಇವರ ಸಹಯೋಗದಲ್ಲಿ ಜರುಗಿದ ಪ್ರಾಥಮಿಕ/ಪ್ರೌಢಶಾಲಾ ವಿದ್ಯಾರ್ಥಿಗಳ ಜಿಲ್ಲಾ ಮಟ್ಟದ 2024-25ನೇ ಸಾಲಿನ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಸ್ಪರ್ಧೆಯಲ್ಲಿ ನಗರದ ವಿದ್ಯಾದಾನ ಸಮಿತಿ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿನಿ ಭಾನುಶ್ರೀ ಕೆ ಧಾರ್ಮಿಕ ಪಠಣ ಸಂಸ್ಕೃತ ಸ್ಪರ್ಧೆಯಲ್ಲಿ ಭಾಗವಹಿಸಿ ದ್ವಿತೀಯ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾಳೆ.

ಸಾಧಕ ವಿದ್ಯಾರ್ಥಿನಿಗೆ, ಮಾರ್ಗದರ್ಶನ ನೀಡಿದ ಸಂಸ್ಕೃತ ಶಿಕ್ಷಕರಾದ ಪ್ರಶಾಂತ ಪಾಟೀಲ, ರಘುತ್ತಮ ನಿಲೂಗಲ್ ಹಾಗೂ ಶಿಕ್ಷಕಿಯರಾದ ಗಾಯತ್ರಿ ಅಸುಂಡಿಯವರಿಗೆ ಸಂಸ್ಥೆಯ ಅಧ್ಯಕ್ಷ ಡಿ.ಬಿ. ಹುಯಿಲಗೋಳ, ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಖಜಾಂಚಿ ಎನ್.ಬಿ. ಕಳಸಾಪುರ, ನಿರ್ದೇಶಕ ಡಾ. ಪವನ ಎಸ್.ಹುಯಿಲಗೋಳ, ಶೈಕ್ಷಣಿಕ ಮಾರ್ಗದರ್ಶಕರಾದ ಪ್ರತೀಕ ಹುಯಿಲಗೋಳ, ಆಡಳಿತ ಅಧಿಕಾರಿಗಳಾದ ಡಾ. ಗಂಗೂಬಾಯಿ ಪವಾರ, ಪಿ.ಎಚ್. ಕಡಿವಾಲ, ಶಾಲೆಯ ಪ್ರಾಚಾರ್ಯ ಎಂ.ಆರ್. ಡೊಳ್ಳಿನ, ಉಪ ಪ್ರಾಚಾರ್ಯ ಅಕ್ಷಯ್ ಜಿ ಸೇರಿದಂತೆ ಶಿಕ್ಷಕರು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿ, ಶುಭ ಕೋರಿದ್ದಾರೆ.

# ಕಿರುತೆರೆ ಹಿರಿಯ ನಟಿ ವಿರುದ್ಧ ಕಿರುಕುಳ ಆರೋಪ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪೋಷಕ ಪಾತ್ರಗಳಲ್ಲಿ ನಟಿಸಿ ಹೆಸರುವಾಸಿಯಾಗಿದ್ದ ಕಿರುತೆರೆ ಹಿರಿಯ ನಟಿ ಶಶಿಕಲಾ ವಿರುದ್ಧ ಕಿರುಕುಳ ಆರೋಪ ಕೇಳಿಬಂದಿದೆ.

ಬ್ಲ್ಯಾಕ್‌ಮೇಲ್ ಮಾಡಿ ಮದುವೆಯಾಗಿ ಕಿರುಕುಳ ನೀಡುತ್ತಿರುವ ಆರೋಪದ ಮೇಲೆ ಶಶಿಕಲಾ ವಿರುದ್ಧ ಬೆಂಗಳೂರಿನ ವಿದ್ಯಾರಣ್ಯಪುರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ನಿರ್ದೇಶಕ ಹರ್ಷವರ್ಧನ್ ಎಂಬುವವರು ಈ ಆರೋಪ ಮಾಡಿದ್ದಾರೆ.

# ಆಂಗ್ಲೋ ಉರ್ದು ಬಾಲಕರ ಪ್ರೌಢಶಾಲೆಯಲ್ಲಿ ಗಣರಾಜ್ಯೋತ್ಸವ

**■ ವಿಜಯಸಾಕ್ಷಿ ಸುದ್ದಿ, ಗದಗ**



ಇಲ್ಲಿನ ಆಂಗ್ಲೋ ಉರ್ದು ಬಾಲಕರ ಪ್ರೌಢಶಾಲೆಯಲ್ಲಿ 76ನೇಯ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಆಚರಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಅಲಹಾಜ ಸರ್ಫರಾಜ್ ಅಹ್ಮದ ಎಸ್. ಉಮಚಗಿಯವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಭಾರತದ ಸಂವಿಧಾನವು 1949ರ ನವೆಂಬರ್ 26ರಂದು ಅಂಗೀಕಾರವಾಗಿ, 1950ರ ಜನವರಿ 26ರಂದು ಜಾರಿಗೆ ಬಂದಿತು. ಈ ದಿನದ ಗೌರವಾರ್ಥವಾಗಿ ಪ್ರತಿ ವರ್ಷ ಜನವರಿ 26ರಂದು ಭಾರತದಲ್ಲಿ ಗಣರಾಜ್ಯೋತ್ಸವ ದಿನವಾಗಿ ಆಚರಿಸಲಾಗುತ್ತದೆ ಎಂದರು.

ಧ್ವಜಾರೋಹಣ ಕಾರ್ಯಕ್ರಮದಲ್ಲಿ ಉಪಾಧ್ಯಕ್ಷರಾದ ಹಾಜಿ ಎ.ಎಂ. ಸೌದಾಗರ, ಕಾರ್ಯದರ್ಶಿಗಳಾದ ಜನಾಬ ಎಂ.ಎಂ. ಶೇಖ, ಸದಸ್ಯರುಗಳಾದ ಜನಾಬ ಆರ್. ಎಲ್. ಬಾಗಲಕೋಟ, ಜನಾಬ ಶಹನವಾಜ ಎಸ್.ಉಮಚಗಿ, ಪ್ರೊ. ಎ.ಎಂ. ಮುಲ್ಲಾ, ಜನಾಬ ಕೆ.ಎಂ. ಶೇಖ, ಜನಾಬ ಜೆ.ಬಿ. ಉಮಚಗಿ, ಹಾಜಿ ಎಂ.ಎ. ಹಣಗಿ, ಜನಾಬ ಎಸ್.ಎ. ಬಿಜಾಪೂರ, ಜನಾಬ ಎಂ.ಎ. ನರಗುಂದ, ಮುಖ್ಯೋಪಾಧ್ಯಾಯೆ ಎನ್.ಎ. ನವಲಗುಂದ ಮತ್ತು ಶಾಲಾ ಸಿಬ್ಬಂದಿವರ್ಗದವರು ಉಪಸ್ಥಿತರಿದ್ದರು.

# ದೇಶದ ಭವಿಷ್ಯಕ್ಕಾಗಿ ಒಟ್ಟಾಗಿ ದುಡಿಯೋಣ

**■ ವಿಜಯಸಾಕ್ಷಿ ಸುದ್ದಿ, ಗದಗ**



ಇಲ್ಲಿನ ವಿ.ಪಿ. ಗಾಲಾ ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಸೈನ್ಸ್ ಕಾಲೇಜಿನಲ್ಲಿ 76ನೇ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು.


ಪ್ರಾಚಾರ್ಯ ಅಮರಯ್ಯ ಚಿನ್ನಯ್ಯನಮಠ ಮಾತನಾಡಿ, ಸಂವಿಧಾನವು ಪ್ರತಿಯೊಬ್ಬ ನಾಗರಿಕರಿಗೂ ಸಮಾನ ಹಕ್ಕುಗಳು ಮತ್ತು ಸ್ವಾತಂತ್ರ್ಯವನ್ನು ನೀಡುತ್ತದೆ. ಗಣರಾಜ್ಯೋತ್ಸವವು ಶಿಕ್ಷಣ, ತಂತ್ರಜ್ಞಾನ ಮತ್ತು ಆರೋಗ್ಯ ರಕ್ಷಣೆಯಂತಹ ಕ್ಷೇತ್ರಗಳಲ್ಲಿ ಭಾರತದ ಪ್ರಗತಿಯನ್ನು ಆಚರಿಸುತ್ತದೆ. ಎಲ್ಲಾ ಭಾರತೀಯರು ತಮ್ಮ ದೇಶದ ಬಗ್ಗೆ ಹೆಮ್ಮೆ ಪಡುವ ಮತ್ತು ಉತ್ತಮ ಭವಿಷ್ಯಕ್ಕಾಗಿ ಒಟ್ಟಾಗಿ ಕೆಲಸ ಮಾಡುವುದಾಗಿ ಭರವಸೆ ನೀಡುವ ಸಮಯ ಇದಾಗಿದೆ ಎಂದರು. ಕಾಲೇಜಿನ ಅಧ್ಯಕ್ಷೆ ರಚನಾ ಗಾಲಾ, ಸೆಕ್ರೆಟರಿ ಪಂಕಜ್ ಗಾಲಾ, ನಿರ್ದೇಶಕ ಗುಂಜನ ಗಾಲಾ, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.



ಗದಗ ಜಿಲ್ಲಾ ತಂಪು ಪಾನೀಯ ವರ್ತಕರ ಸಂಘದಿಂದ 76ನೇ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು. ಹಿರಿಯರಾದ ಲುಕ್ಕಣಸಾ ರಾಜೋಳಿ ಧ್ವಜಾರೋಹಣ ನೆರವೇರಿಸಿದರು. ಕಾರ್ಯದರ್ಶಿ ಶಂಕರಸಾ ಪವಾರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪಾಧ್ಯಕ್ಷ ಮಾಧುಸಾ ಪವಾರ, ನಂದು ಬೇವಿನಕಟ್ಟಿ, ಯಲ್ಲೋಸಾ ಹಬೀಬ, ಮಂಜುನಾಥ ಕೆಂಧೋಳಿ, ನಾಗರಾಜ ಪರಕಾಳೆ, ಕಾಶೀನಾಥ ಪರಕಾಳೆ, ಶ್ರೀನಿವಾಸ ಚವ್ಹಾಣ, ಸಂಜು ಹಬೀಬ, ಗಗನ ಹಬೀಬ ಸೇರಿದಂತೆ ಸಂಘದ ಪದಾಧಿಕಾರಿಗಳು, ಸದಸ್ಯರು ಉಪಸ್ಥಿತರಿದ್ದರು.

# ಸಾಂವಿಧಾನಿಕ ಮೌಲ್ಯಗಳ ಅನುಷ್ಠಾನವಿರಲಿ

**■ ವಿಜಯಸಾಕ್ಷಿ ಸುದ್ದಿ, ಗದಗ**



ಕೇವಲ ಗಣರಾಜ್ಯೋತ್ಸವ ಆಚರಿಸುವುದಕ್ಕೆ ಮಾತ್ರ ಭಾರತೀಯ ಮನಸುಗಳು ಸೀಮಿತವಾಗಿರದೇ ಸಾಂವಿಧಾನಿಕ ಮೌಲ್ಯಗಳ ಅರಿವನ್ನು ಪಡೆದು ನಿಜಜೀವನದಲ್ಲಿ ಅವುಗಳನ್ನು ಅನುಷ್ಠಾನಗೊಳಿಸಿಕೊಂಡಾಗ ಮಾತ್ರ ಆಚರಣೆಗೆ ಮಹತ್ವ ಬರುತ್ತದೆ ಎಂದು ಸ್ಟುಡೆಂಟ್ಸ್ ಎಜ್ಯುಕೇಶನ್ ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ ಅಭಿಪ್ರಾಯಪಟ್ಟರು.

ನಗರದ ಸನ್ಮಾರ್ಗ ಪದವಿಪೂರ್ವ ಕಾಲೇಜಿನಲ್ಲಿ ಜರುಗಿದ 76ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ವಿಶೇಷವಾಗಿ ಯುವ ಜನಾಂಗ ಸಂವಿಧಾನದ ತತ್ವಗಳನ್ನು ತಿಳಿಯಬೇಕಾಗಿರುವುದು ಹಿಂದೆಂದಿಗಿಂತಲೂ ಇಂದು ಅಗತ್ಯ ಹಾಗೂ ಅನಿವಾರ್ಯವಾಗಿದೆ ಎಂದರು. ಧ್ವಜಾರೋಹಣ ನೆರವೇರಿಸಿ ಪ್ರೊ. ಸಂಗಿತಾ ಬೀಳಗಿ ಮಾತನಾಡಿ, ಎಲ್ಲಾ ಭಾರತೀಯರಲ್ಲಿ ಸಂವಿಧಾನದ ಕುರಿತು ಗೌರವ, ಅಭಿಮಾನಗಳಿರಲಿ ಎಂದರು.

ಸಂಸ್ಥೆಯ ಸದಸ್ಯ ಪ್ರೊ. ರೋಹಿತ್ ಒಡೆಯರ್, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾರಂಭದಲ್ಲಿ ಸಂಸ್ಥೆಯ ಆಡಳಿತಾಧಿಕಾರಿಗಳಾದ ಎಂ.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ರಾಹುಲ್ ಒಡೆಯರ್, ಪ್ರೊ. ಪುನೀತ ದೇಶಪಾಂಡೆ, ಪ್ರೊ. ಸೈಯ್ಯದ್ ಮತಿನ್ ಮುಲ್ಲಾ, ಬೋಧಕ-ಬೋಧಕೇತರ ಸಿಬ್ಬಂದಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು.

# ದೇಶದ ಅಭಿವೃದ್ಧಿಗೆ ಆದ್ಯತೆ ನೀಡೋಣ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಪಟ್ಟಣದ ಪುರಸಭೆಯ ಆವರಣದಲ್ಲಿ 76ನೇ ಗಣರಾಜ್ಯೋತ್ಸವದ ಧ್ವಜಾರೋಹಣವನ್ನು ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ಪರಸ್ಪರ ಸಮಾನತೆ, ಸಹಬಾಳ್ವೆ, ಜಾತ್ಯಾತೀತತೆ, ಧರ್ಮ, ಸತ್ಯ, ನ್ಯಾಯ ಮತ್ತು ಸೌಹಾರ್ದತೆಯು ನಮ್ಮ ದೇಶದ ಸಂಕೇತವಾಗಿದೆ. ಎಲ್ಲರೂ ದೇಶದ ಅಭಿವೃದ್ಧಿಗೆ ಆದ್ಯತೆ ನೀಡುವದು ಅವಶ್ಯವಾಗಿದೆ ಎಂದು ಹೇಳಿದರು.

ಹಿರಿಯ ಸದಸ್ಯರಾದ ರಾಜಣ್ಣ ಕುಂಬಿ, ಅಶ್ವಿನಿ ಅಂಕಲಕೋಟಿ, ಪ್ರವೀಣ ಬಾಳಿಕಾಯಿ, ಎಸ್.ಕೆ. ಹವಾಲ್ದಾರ ಸಾಂದರ್ಭಿಕವಾಗಿ ಮಾತನಾಡಿದರು.

ಮುಖ್ಯಾಧಿಕಾರಿ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿ, ದೇಶದ ಸ್ವಾತಂತ್ರ್ಯ, ಅಭಿವೃದ್ಧಿ, ರಕ್ಷಣೆಗಾಗಿ ಅನೇಕ ಮಹನೀಯರು ತ್ಯಾಗ, ಬಲಿದಾನ ಮಾಡಿದ್ದಾರೆ. ಸುಂದರ ಸಮಾಜ ನಿರ್ಮಾಣಕ್ಕೆ ಯುವ ಜನಾಂಗ ದುಶ್ಚಟಗಳಿಂದ ದೂರವಿದ್ದು ಸ್ವಚ್ಛ, ಸುಂದರ ಸಮಾಜ ನಿರ್ಮಾಣಕ್ಕೆ ಕೈಜೋಡಿಸೋಣ ಎಂದರು.

ಪುರಸಭೆಯ ಸದಸ್ಯರು, ಸಿಬ್ಬಂದಿ, ಪುರಸಭೆ ಅಂಗ ಸಂಸ್ಥೆಗಳಾದ ಉಮಾ ವಿದ್ಯಾಲಯ, ಪುರಸಭೆ ಪ.ಪೂ ಕಾಲೇಜು, ಪುರಸಭೆ ಪದವಿ ಕಲಾ ಮಹಾವಿದ್ಯಾಲಯಗಳ ಮುಖ್ಯೋಪಾಧ್ಯಾಯರು, ಪ್ರಾಚಾರ್ಯರು, ಉಪನ್ಯಾಸಕರು, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಶೋಷಣೆಮುಕ್ತ, ಸಮಾನತೆಯ ಸಮಾಜ ಕಟ್ಟುವಲ್ಲಿ ಸಮರ್ಪಿತರಾಗೋಣ

▶▶ ಮೊದಲನೇ ಪುಟದಿಂದ

ಸಂವಿಧಾನವನ್ನು ಎತ್ತಿ ಹಿಡಿಯಲು ಕಂಕಣ ಬದ್ಧರಾಗೋಣ ಎಂದರು.


ಕಲೆ, ಸಾಹಿತ್ಯ, ಸಂಸ್ಕೃತಿ, ಆಧ್ಯಾತ್ಮ, ಸಂಗೀತ, ವಾಸ್ತುಶಿಲ್ಪ, ಶಿಲ್ಪಕಲೆ, ಚಿತ್ರಕಲೆ, ಸಹಕಾರ, ಔದ್ಯಮಿಕ ಕ್ಷೇತ್ರಗಳಲ್ಲಿ ವಿಶಿಷ್ಟ ಸ್ಥಾನ ಪಡೆದಿರುವ ಗದಗ ಪರಿಸರದಲ್ಲಿ ಸಂಗೀತ ನಿನಾದಿಸುತ್ತಿದೆ. ನಮ್ಮ ಜಿಲ್ಲೆಯ ಗಾಳಿಯಲ್ಲಿ ವಿದ್ಯುತ್ ಇದೆ. ಗಣಿಗಳಲ್ಲಿ ಬಂಗಾರವಿದೆ. ಇಲ್ಲಿ ದೇವಾಲಯಗಳು, ಬಸದಿಗಳು, ದರ್ಗಾಗಳು ಹಾಗೂ ಅನೇಕ ಪ್ರಾಚೀನ ಸ್ಮಾರಕಗಳಿವೆ. ಖ್ಯಾತಿವೆತ್ತ ಕಲಾವಿದರ ನೆಲೆಬೀಡಾಗಿದೆ. ಸಾಂಸ್ಕೃತಿಕ ವೈಭವ ಸಾರುವ ಈ ಪರಿಸರ ಐತಿಹಾಸಿಕ, ಪಾರಂಪಾರಿಕ, ನೆಲಗಳನ್ನೊಳಗೊಂಡಿದೆ.

ಇಲ್ಲಿ ಧರ್ಮ ಸಮನ್ವಯತೆ ಇದೆ, ಸಾಮರಸ್ಯವಿದೆ. ಇಲ್ಲಿ ಬಂಧುತ್ವ ಬಲಗೊಂಡಿದೆ. ಪ್ರೀತಿ- ಸ್ನೇಹ ಬೆಸೆದುಕೊಂಡಿದೆ. ಪುರಾತತ್ವದ ನೆಲೆಗಳಿವೆ. ಆಧುನಿಕತೆ ತೆರೆದುಕೊಂಡಿದೆ. ಇದು ಸಹಕಾರದ ಗಂಗೋತ್ರಿ, ಒಟ್ಟಿನಲ್ಲಿ ಗದಗ ಜಿಲ್ಲೆ ರಾಜ್ಯದ ಸಾಂಸ್ಕೃತಿಕ, ಸಾಹಿತ್ಯಕ ರಾಜಧಾನಿಯಾಗಿದೆ ಎಂಬುದು ನಮಗೆಲ್ಲ ಹೆಮ್ಮೆಯ ಸಂಗತಿಯಾಗಿದೆ ಎಂದರು.

ಜಗತ್ತಿನಲ್ಲಿ ಬಡವರನ್ನು ಮೇಲ್ಮಟ್ಟಕ್ಕೇರಿಸುವ ಮೂಲಕ ಕ್ರಾಂತಿಕಾರಕ ಕೆಲಸ ಮಾಡಿದ ಹೆಗ್ಗಳಿಕೆ ನಮ್ಮ ಸರ್ಕಾರದ್ದಾಗಿದೆ. 5 ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ನಿರಂತರ ಶ್ರಮಿಸುವದರ ಮೂಲಕ ನುಡಿದಂತೆ ನಡೆದಿದ್ದೇವೆ. ಬಡವರ ಕಲ್ಯಾಣ ಕೆಲಸಗಳಿಗೆ ನಮ್ಮ ಸರಕಾರ ಎಂದಿಗೂ ಬದ್ಧವಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ವಿಶ್ವಾಸದಿಂದ ನುಡಿದರು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಸಿಇಓ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಡಿಸಿಎಫ್ ಸಂತೋಷ ಕೆಂಚಪ್ಪನವರ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರುಗಳು, ಸಾರ್ವಜನಿಕರು, ಅಪಾರ ಸಂಖ್ಯೆಯಲ್ಲಿ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## 'ಕನ್ನಡ ಶಾಸನಗಳ ಅಧ್ಯಯನ' ಕಾರ್ಯಾಗಾರ ಇಂದಿನಿಂದ



■ವಿಜಯಸಾಕ್ಷಿ ಸುದ್ದಿ, ಗದಗ

ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ, ಭಾರತೀಯ ಭಾಷಾ ಸಂಸ್ಥಾನ ಮೈಸೂರು, ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಕೇಂದ್ರ, ತೋಂಟದಾರ್ಯಮಠ ಗದಗ ಹಾಗೂ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ಕನ್ನಡ ಶಾಸನಗಳ ಅಧ್ಯಯನ ಮತ್ತು ಸಂಶೋಧನೆ ಕುರಿತು 5 ದಿನಗಳ ತರಬೇತಿ ಕಾರ್ಯಾಗಾರವನ್ನು ಜ.27ರಿಂದ ಜ.31ರವರೆಗೆ ಗದುಗಿನ ಬಸವೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದೆ.

ಜ. 27ರಂದು ಜರುಗುವ ಉದ್ಘಾಟನಾ ಸಮಾರಂಭದ ಸಾನ್ನಿಧ್ಯವನ್ನು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಉದ್ಘಾಟನೆಯನ್ನು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಪರಮಶಿವಮೂರ್ತಿ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಹಿರಿಯ ಶಾಸನ ತಜ್ಞರಾದ ಡಾ. ಹನುಮಾಕ್ಷಿ ಗೋಗಿ ಪಾಲ್ಗೊಳ್ಳುವರು. ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ವಹಿಸುವರು. ಶಾಸ್ತ್ರೀಯ ಕನ್ನಡ ಅತ್ಯುನ್ನತ ಕೇಂದ್ರದ ಯೋಜನಾ ನಿರ್ದೇಶಕ ಪ್ರೊ. ಎನ್.ಎಂ. ತಳವಾರ ಪ್ರಾಸ್ತಾವಿಕ ನುಡಿಗಳನ್ನಾಡುವರು. ಬಸವೇಶ್ವರ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಎಂ.ಎಂ. ಬುರಡಿ, ಎಂ.ಎಂ. ಕಲಬುರ್ಗಿ ಅಧ್ಯಯನ ಕೇಂದ್ರದ ಸಂಯೋಜಕ ಡಾ. ಅರ್ಜುನ ಗೊಳಸಂಗಿ ಉಪಸ್ಥಿತರಿರುವರು.

5ದಿನಗಳ ತರಬೇತಿ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ತಜ್ಞರಾದ ಪ್ರೊ. ದೇವರ ಕೊಂಡಾರೆಡ್ಡಿ, ಎಂ.ಜಿ. ಮಂಜುನಾಥ, ಡಾ. ನಾಗರಾಜಪ್ಪ, ರಂಗರಾಜು ಎನ್.ಎಸ್., ಡಾ. ಎಸ್. ರಾಜೇಂದ್ರಪ್ಪ, ಡಾ. ಷಡಕ್ಷರಯ್ಯ, ಜೆ.ಎಂ. ನಾಗಯ್ಯ, ಡಾ. ಎಸ್.ವೈ. ಸೋಮಶೇಖರ, ಡಾ. ಅನಿಲಕುಮಾರ, ಡಾ. ರಾಜಶೇಖರಪ್ಪ, ಡಾ. ಗವಿಸಿದ್ಧಯ್ಯ, ಡಾ. ಡಿ. ಸ್ಮಿತಾರೆಡ್ಡಿ ಭಾಗವಹಿಸುವರೆಂದು ಡಾ. ಎಲ್.ಆರ್. ಪ್ರೇಮಕುಮಾರ, ಡಾ. ಮರಿಸ್ವಾಮಿ ಆರ್ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## 'ಸಂವಿಧಾನ ಸನ್ಮಾನ, ಭೀಮ ಸಂಗಮ' ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

'ನಮ್ಮ ಸಂವಿಧಾನ ನಮ್ಮ ಹೆಮ್ಮೆ' ಅಭಿಯಾನದಡಿ ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರ ನಿವಾಸದಲ್ಲಿ 'ಸಂವಿಧಾನ ಸನ್ಮಾನ ಹಾಗೂ ಭೀಮ ಸಂಗಮ' ಕಾರ್ಯಕ್ರಮವನ್ನು ಜ.27ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿರುವುದೆಂದು ಬಿ.ಜೆ.ಪಿ. ಪರಿಶಿಷ್ಟ ಜಾತಿ ಮತ್ತು ಪಂಗಡದ ಅಧ್ಯಕ್ಷರುಗಳಾದ ಮಂಜುನಾಥ ಮುಳಗುಂದ ಹಾಗೂ ಈಶ್ವರಪ್ಪ ರಂಗಪ್ಪನವರ ತಿಳಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಸಂವಿಧಾನದ ಹಾಗೂ ಡಾ. ಬಾಬಾಸಾಹೇಬ ಅಂಬೇಡ್ಕರ ಅವರ ಕೊಡುಗೆ ಕುರಿತು ವಿಚಾರ ಸಂಕೀರಣ ಏರ್ಪಡಿಸಲಾಗಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕರಿಗೆ ಗೌರವ ಸಮರ್ಪಣೆ ಮಾಡಲಾಗುವುದು. ವಿಶೇಷ ಉಪನ್ಯಾಸಕರಾಗಿ ಕೆ.ಎಚ್. ಬೇಲೂರ ಹಾಗೂ ಅತಿಥಿಗಳಾಗಿ ಉಷಾ ಮಹೇಶ ದಾಸರ, ಶಿವಣ್ಣ ಮುಳಗುಂದ, ರವಿ ದಂಡಿನ, ಉಡಚಪ್ಪ ಹಳ್ಳಿಕೇರಿ ಆಗಮಿಸುವವರು.

ಕಾರ್ಯಕ್ರಮದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಮುಖಂಡರಾದ ವಾಯ್.ಪಿ. ಅಡ್ನೂರ, ಲಕ್ಷ್ಮಣ ದೊಡ್ಡಮನಿ, ಅಶೋಕ ಕುಡಿತಿನಿ, ಮಹೇಶ ದಾಸರ, ಈಶ್ವರಪ್ಪ ರಂಗಪ್ಪನವರ ಹಾಗೂ ನಗರಸಭೆ ಸದಸ್ಯರುಗಳಾದ ನಾಗರಾಜ ತಳವಾರ, ಪ್ರಕಾಶ ಅಂಗಡಿ, ಮುತ್ತಣ್ಣ ಮುಶೀಗೇರಿ, ರಾಘವೇಂದ್ರ ಪರಾಪೂರ, ರಾಜೇಶ ಕಟ್ಟಿಮನಿ, ರಾಜೇಶ ಮುಟಗಾರ, ಮಾಯಪ್ಪ ಭಜಂತ್ರಿ, ಮಂಜುನಾಥ ತಳವಾರ, ಫಕೀರೇಶ ಮುಳಗುಂದ, ಗಣೇಶ ಹುಬ್ಬಳ್ಳಿ, ಭೀಮಸಿಂಘ ರಾಠೋಡ, ಹುಚ್ಚಪ್ಪ ಭಜಂತ್ರಿ, ಬುದಪ್ಪ ಹುಣಸೀಮರದ, ಆನಂದ ಹೂಲಿ, ಪರಮೇಶ ಲಮಾಣಿ, ವಿಲಾಸ ಕೊಪ್ಪಳ, ನ್ಯಾಯವಾದಿಗಳಾದ ಶ್ರೀಕಾಂತ ದೊಡ್ಡಮನಿ ಹಾಗೂ ಪದ್ಮಿನಿ ಮುತ್ತಲದಿನ್ನಿ, ಮೇಘನಾ ಕೋಟೂರ, ಸಂತೋಷ ಅಕ್ಕಿ, ಎಚ್.ಟಿ. ಸಂಜೀವಸ್ವಾಮಿ, ವಿ.ಬಿ. ಶೇಷಗಿರಿ ಉಪಸ್ಥಿತರಿರುವರು.

ಬಿಜೆಪಿ ಜಿಲ್ಲಾಧ್ಯಕ್ಷರಾದ ರಾಜು ಕುರಡಗಿ, ಶಹರ ಮಂಡಳದ ಅಧ್ಯಕ್ಷ ಅನಿಲ ಅಬ್ಬಿಗೇರಿ, ಮಾಜಿ ಜಿಲ್ಲಾ ಅಧ್ಯಕ್ಷ ಎಮ್.ಎಸ್. ಕರಿಗೌಡ್ರ, ನಾಗರಾಜ ಕುಲಕರ್ಣಿ, ರಮೇಶ ಸಜ್ಜಗಾರ, ಮಹಿಳಾ ಮೋರ್ಚಾದ ಅಧ್ಯಕ್ಷರಾದ ನಿರ್ಮಲಾ ಕೊಳ್ಳಿ, ವಿಜಯಲಕ್ಷ್ಮಿ ಮಾನ್ವಿ, ಯೋಗೇಶ್ವರಿ ಭಾವಿಕಟ್ಟಿ ಮುಂತಾದವರು ಹಾಜರಿರುವರು ಎಂದು ಪ್ರಕಟಣೆ ತಿಳಿಸಿದೆ.

### ಉಮಾವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ತಾಲೂಕಾಡಳಿತದಿಂದ ಗಣರಾಜ್ಯೋತ್ಸವ ಧ್ವಜಾರೋಹಣ

## ನಮ್ಮ ಹಕ್ಕು, ಕರ್ತವ್ಯಗಳನ್ನು ಸಮರ್ಥವಾಗಿ ನಿರ್ವಹಿಸೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನವಭಾರತದ ಭವಿತವ್ಯವನ್ನು ಮತ್ತಷ್ಟು ಬಲಿಷ್ಠ, ಶ್ರೀಮಂತಗೊಳಿಸುವ ನಿಟ್ಟಿನಲ್ಲಿ ದೇಶದ ಸರ್ವಧರ್ಮ ಗ್ರಂಥವಾದ ಸಂವಿಧಾನದ ಆಶಯದಂತೆ ಪ್ರತಿಯೊಬ್ಬರೂ ತಮ್ಮ ಪಾಲಿನ ಹಕ್ಕು ಮತ್ತು ಕರ್ತವ್ಯಗಳನ್ನು ಪ್ರಾಮಾಣಿಕತೆಯಿಂದ ನಿರ್ವಹಿಸಬೇಕು ಎಂದು ಎಂದು ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಹೇಳಿದರು.

ಅವರು ಭಾನುವಾರ ಪಟ್ಟಣದ ಉಮಾವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ತಾಲೂಕಾಡಳಿತದಿಂದ ಹಮ್ಮಿಕೊಳ್ಳಲಾಗಿದ್ದ 76ನೇ ಗಣರಾಜ್ಯೋತ್ಸವದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಸಾರ್ವಭೌಮ, ಜಾತ್ಯಾತೀತ, ಭ್ರಾತೃತ್ವ, ಸಮಾನತೆಯನ್ನೊಳಗೊಂಡ ಶ್ರೇಷ್ಠ ಪ್ರಜಾಪ್ರಭುತ್ವ ಹೊಂದಿದ ಭಾರತದ ಅಭಿವೃದ್ಧಿಗೆ ನಾವೆಲ್ಲ ದೃಢ ಸಂಕಲ್ಪದಿಂದ ಮುನ್ನಡೆಯಬೇಕಾಗಿದೆ. ವಿವಿಧತೆಯಲ್ಲಿ ಏಕತೆ ಹೊಂದಿರುವ ಸಾಂಸ್ಕೃತಿಕ ಪರಂಪರೆಯ ಭಾರತವೀಗ ಶಿಕ್ಷಣ, ಆರೋಗ್ಯ, ಕೃಷಿ, ರಕ್ಷಣೆ, ವಿಜ್ಞಾನ, ತಂತ್ರಜ್ಞಾನ ಹೀಗೆ ಎಲ್ಲ ಕ್ಷೇತ್ರಗಳಲ್ಲಿ ಅಭಿವೃದ್ಧಿ ಪಥದತ್ತ ಸಾಗುತ್ತಿದೆ. ಆದಾಗ್ಯೂ ಹೆಚ್ಚುತ್ತಿರುವ ಜನಸಂಖ್ಯೆ, ಅನಕ್ಷರತೆ, ಸ್ವಚ್ಛತೆ, ಆರೋಗ್ಯ ಸಮಸ್ಯೆಗಳಿಂದ ಹಿನ್ನಡೆ ಅನುಭವಿಸುತ್ತಿದೆ. ವಿವಿಧತೆ ಹೊಂದಿರುವ ದೇಶದಲ್ಲಿ ಸಮಾನತೆ, ಸಾರ್ವಭೌಮತ್ವ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಭಾವನೆಯನ್ನು ತರುವ ಉದ್ದೇಶದಿಂದ ಅಂಗೀಕಾರವಾದ ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯುವ ಆದರ್ಶ ಗಣರಾಜ್ಯದ ಸಂಕಲ್ಪದೊಂದಿಗೆ ನಡೆಯೋಣ ಎಂದರು.



ಧ್ವಜಾರೋಹಣದ ಬಳಿಕ ಮೈದಾನದಲ್ಲಿ ಸೇರಿದ್ದ ಪೊಲೀಸ್, ಎನ್‌ಸಿಸಿ ಹಾಗೂ ಪಟ್ಟಣದ ಹತ್ತಾರು ಶಾಲಾ ವಿದ್ಯಾರ್ಥಿಗಳಿಂದ ಆಕರ್ಷಕ ಪಥ ಸಂಚಲನ ಜರುಗಿತು. ಪಿಎಸ್‌ಐ ನಾಗರಾಜ ಗಡದ ಪಥಸಂಚಲನದ ನೆರವೇರಿಸಿದರು. ಪಥ ಸಂಚಲನದಲ್ಲಿ ಬಿಸಿಎನ್ ಹೈಸ್ಕೂಲ್ (ಪ್ರಥಮ), ದಿ ಯೂನಿಕ್ ಶಾಲೆ(ದ್ವಿತೀಯ) ಎಸ್‌ಟಿಪಿಎಂಬಿ ಆಂಗ್ಲ ಮಾಧ್ಯಮ (ತೃತೀಯ) ಸ್ಥಾನ ಪಡೆಯಿತು. ಈ ವೇಳೆ ಬಿ.ಡಿ. ತಟ್ಟಿ ಶಾಲೆಯ ವಿಕಲಚೇತನ ವಿದ್ಯಾರ್ಥಿಗಳು ಸೇರಿ ವಿವಿಧ ಶಾಲೆಯ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಕಣ್ಮನ ಸೆಳೆದವು.

ತಾ.ಪಂ ಇಓ ಕೃಷ್ಣಪ್ಪ ಧರ್ಮರ ಮಾತನಾಡಿ, ವಿವಿಧತೆ ಹೊಂದಿರುವ ದೇಶದಲ್ಲಿ ಸಮಾನತೆ, ಸಾರ್ವಭೌಮತ್ವ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಭಾವನೆಯನ್ನು ತರುವ ಉದ್ದೇಶದಿಂದ ಅಂಗೀಕಾರವಾದ ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯುವ ಆದರ್ಶ ಗಣರಾಜ್ಯದ ಸಂಕಲ್ಪಕ್ಕೆ ಎಲ್ಲರೂ ಕೈಜೋಡಿಸೋಣ ಎಂದರು.

ಸಭೆಯಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜಾನಪದ ಸಾಹಿತಿ ಡಾ. ಶಂಭು ಬಳಿಗಾರ, ರಾಷ್ಟ್ರೀಯ ಕುಸ್ತಿಯಲ್ಲಿ ಚಿನ್ನದ ಪದಕ ಪಡೆದ ಪಟ್ಟಣದ ಜಯಶ್ರೀ ಗುಡಗುಟಿ ಸೇರಿದಂತೆ ಕಂದಾಯ, ಪೊಲೀಸ್, ಹೆಸ್ಕಾಂ ವಿವಿಧ ಇಲಾಖೆಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ತಾಲೂಕಾಡಳಿತದ ವತಿಯಿಂದ ಸನ್ಮಾನಿಸಲಾಯಿತು.

ಚಂದನ ಶಾಲೆಯ ವಿದ್ಯಾರ್ಥಿಗಳು ಬ್ಯಾಂಡ್ ಮೂಲಕ ರಾಷ್ಟ್ರಗೀತೆ ನುಡಿಸಿದರು. ಎಸ್‌ಟಿಪಿಎಂಬಿ ಪ್ರಾಥಮಿಕ ಶಾಲೆಯ ಮಕ್ಕಳು ರಾಷ್ಟ್ರಗೀತೆ, ನಾಡಗೀತೆ ಹಾಡಿದರು. ಗಣರಾಜ್ಯೋತ್ಸವ ಅಂಗವಾಗಿ ಶಾಲಾ ಮಕ್ಕಳಿಗಾಗಿ ಹಮ್ಮಿಕೊಳ್ಳಲಾಗಿದ್ದ ಸ್ಪರ್ಧಾ ವಿಜೇತ ಮಕ್ಕಳಿಗೆ ಪ್ರಶಸ್ತಿ ನೀಡಲಾಯಿತು.

ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಪಿಎಸ್‌ಐ ನಾಗರಾಜ ಗಡದ, ಹೆಸ್ಕಾಂ ಅಧಿಕಾರಿ ಆಂಜನೇಯಪ್ಪ, ಉಪನೋಂದಣಾಧಿಕಾರಿ ಎಸ್.ಕೆ. ಜಲರಡ್ಡಿ, ಎಪಿಎಂಸಿ ಕಾರ್ಯದರ್ಶಿ ರುದ್ರಗೌಡ ಪಾಟೀಲ, ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ಪಿಎಸ್‌ಐ ಟಿ.ಕೆ. ರಾಥೋಡ, ಕೃಷಿಕ ಸಮಾಜದ ತಾಲೂಕ ಅಧ್ಯಕ್ಷ ಮಹೇಶ ಹೊಗೆಸೊಪ್ಪಿನ, ಶಿವಾನಂದ ಬಾನಿ, ಪ್ರಶಾಂತ ಕಿಮಾಯಿ, ಕಂದಾಯ ನಿರೀಕ್ಷಕ ಎಂ.ಎ. ನದಾಫ್,

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ಶಂಭು ಬಳಿಗಾರ, ಗಣರಾಜ್ಯೋತ್ಸವ ದೇಶದ ಹೆಮ್ಮೆ ಮತ್ತು ಪ್ರಗತಿಯ ದ್ಯೋತಕವಾಗಿದ್ದು, ಸ್ವಾಭಿಮಾನದಿಂದ ಬದುಕುವುದನ್ನು ಕಲಿಸಿರುವ ಭಾರತ ಮಾತೆಯ ಮಕ್ಕಳಾದ ನಾವೆಲ್ಲ ದೇಶದ ಅಭಿವೃದ್ಧಿಗೆ ಕೈಜೋಡಿಸೋಣ. ಶಿಕ್ಷಕರು, ಪಾಲಕರು ಮಕ್ಕಳಿಗೆ ಬಾಲ್ಯದಲ್ಲಿಯೇ ಉತ್ತಮ ಸಂಸ್ಕಾರ, ಮೌಲ್ಯಗಳನ್ನು ಬಿತ್ತುವ ಕೆಲಸ ಮಾಡೋಣ ಎಂದರು.

ಬಿಎಸ್ ಹಿರೇಮಠ ಸೇರಿ ಪುರಸಭೆ ಸದಸ್ಯರು, ವಿವಿಧ ಶಾಲಾ ಕಾಲೇಜುಗಳು, ಉಪನ್ಯಾಸಕರು, ಶಿಕ್ಷಕರು ಸಿಬ್ಬಂದಿಗಳು ಹಾಜರಿದ್ದರು.

ಬಿಆರ್‌ಪಿ ಈಶ್ವರ ಮೆಡ್ಲೇರಿ, ಸಿಆರ್‌ಪಿಗಳಾದ ಉಮೇಶ ನೇಕಾರ, ಸತೀಶ ಬೋಮಲೆ, ಎನ್.ಎ. ಮುಲ್ಲಾ ನಿರೂಪಿಸಿದರು. ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ಸ್ವಾಗತಿಸಿದರು. ನಂತರ ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ವೇಷಭೂಷಣ, ದೇಶಭಕ್ತಿಗೀತೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಸ್ಪರ್ಧೆಗಳು ಜರುಗಿದವು. ವಿವಿಧ ಇಲಾಖೆಗಳ ಅಧಿಕಾರಿಗಳು, ಶಾಲೆಗಳ ಶಿಕ್ಷಕವೃಂದ ಪಾಲ್ಗೊಂಡಿದ್ದರು. ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ಸ್ವಾಗತಿಸಿದರು. ಬಿಆರ್‌ಪಿ ಈಶ್ವರ ಮೆಡ್ಲೇರಿ, ಸಿಆರ್‌ಪಿ ಸತೀಶ ಬೋಮಲೆ, ಉಮೇಶ ನೇಕಾರ, ಎನ್.ಎ ಮುಲ್ಲಾ ನಿರ್ವಹಿಸಿದರು.



## ಗಮನ ಸೆಳೆದ ಭರತನಾಟ್ಯ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇತ್ತೀಚೆಗೆ ಗಜೇಂದ್ರಗಡದಲ್ಲಿ ನಡೆದ 10ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸಾಂಸ್ಕೃತಿಕ ವಿಭಾಗದಲ್ಲಿ ಪಟ್ಟಣದ ಸಿಂಧೂ ಪಾಟೀಲ ಪ್ರದರ್ಶಿಸಿದ ಭರತನಾಟ್ಯ ಗಮನ ಸೆಳೆಯಿತು.

ನರೇಗಲ್ಲದ ಶ್ರೀ ಬಸವೇಶ್ವರ ಪ್ರಾಥಮಿಕ ಶಾಲೆಯಲ್ಲಿ 4ನೇ ತರಗತಿಯಲ್ಲಿ ಅಭ್ಯಾಸ ಮಾಡುತ್ತಿದ್ದು, ನರೇಗಲ್ಲ ಪಟ್ಟಣ ಅಭಿವೃದ್ಧಿ ಸಮಿತಿಯ ಅಧ್ಯಕ್ಷ ಶಿವನಗೌಡ ಪಾಟೀಲ ಮತ್ತು ಮಂಜುಳಾ ದಂಪತಿಗಳ ಪುತ್ರಿಯಾಗಿದ್ದಾಳೆ. ಕಳೆದ ಮೂರು ವರ್ಷಗಳಿಂದ ಇವಳು ಗದುಗಿನ ನಿಮಿಷಾಂಬಾ ನಾಟಕ ಅಕಾಡೆಮಿಯ ಸಂಸ್ಥಾಪಕಿ, ವಿದೂಷಿ ಜ್ಯೋತಿಶ್ರೀ ಅವರ ಬಳಿ ತರಬೇತಿ ಪಡೆಯುತ್ತಿದ್ದಾಳೆ. ಭರತನಾಟ್ಯದಲ್ಲಿ ಮೂರು ಪರೀಕ್ಷೆಗಳನ್ನು ಇವಳು ಈಗಾಗಲೇ ಪೂರೈಸಿದ್ದು, ಈಗ ಗದುಗಿನ ಕಲಾಕಟಿರದ ವಿದೂಷಿ ಮಾಲಾರವೆ ಅವರಲ್ಲಿ ತರಬೇತಿಯನ್ನು ಪಡೆಯುತ್ತಿದ್ದಾಳೆ.

ನರೇಗಲ್ಲದ ಶ್ರೀ ದ್ಯಾಮವ್ವ ದೇವತಾ ಜಾತ್ರೆಯಲ್ಲಿ, ರೋಣದ ಬಸಮ್ಮ ತಾಯಿಯವರ ಪುಣ್ಯಸ್ಮರಣೋತ್ಸವದಲ್ಲಿ, ಅಬ್ಬಿಗೇರಿಯಲ್ಲಿ ನಡೆದ ಶರದ್ ನವರಾತ್ರಿ ಉತ್ಸವದಲ್ಲಿ, ನರೇಗಲ್ಲದ ಕಾಳಿಕಾ ದೇವಿಯ ಧಾರ್ಮಿಕ ಕಾರ್ಯದಲ್ಲಿ, ಗದುಗಿನ ಶ್ರೀ ಮಾರುತೇಶ್ವರ ಮಂದಿರದ ಕಾರ್ತಿಕೋತ್ಸವದಲ್ಲಿ ಈಕೆ ಪ್ರದರ್ಶಿಸಿದ ನೃತ್ಯವನ್ನು ಬಾಳೆಹೊನ್ನೂರಿನ ಜಗದ್ಗುರು ಶ್ರೀ ರಂಭಾಪುರಿ ಶ್ರೀಗಳು, ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶ್ರೀಗಳು, ಹೆಬ್ಬಳ್ಳಿ ಚೈತನ್ಯಾಶ್ರಮದ ಶ್ರೀ ದತ್ತಾವಧೂತ ಮಹಾರಾಜರು, ಶಾಸಕ ಜಿ.ಎಸ್. ಪಾಟೀಲರು, ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ತಾಲೂಕಾ ಅಧ್ಯಕ್ಷ ಅಮರೇಶ ಗಾಣಿಗೇರ ಮತ್ತಿತರ ಗಣ್ಯರು ಮೆಚ್ಚಿ ಶುಭ ಕೋರಿದ್ದಾರೆ.

## ಬಣಕಾರ, ಶಿರಹಟ್ಟಿ ಅವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ 76ನೇ ಗಣರಾಜ್ಯೋತ್ಸವದ ಅಂಗವಾಗಿ ಜರುಗಿದ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ವಿಕಲಚೇತನರ ಕ್ಷೇತ್ರದ ಸೇವೆಗಾಗಿ ರಾಜ್ಯ ಪ್ರಶಸ್ತಿ ಪಡೆದ ಮುಂಡರಗಿಯ ವಿಜಯಕುಮಾರ ಬಣಕಾರ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದಕ್ಕಾಗಿ ಲಕ್ಷ್ಮೇಶ್ವರದ ಕರಿಯಪ್ಪ ಶಿರಹಟ್ಟಿ ಅವರುಗಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕೆಂಚಪ್ಪನವರ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಮುಂತಾದವರು ಉಪಸ್ಥಿತರಿದ್ದರು.

## ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಗಣರಾಜ್ಯೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ 76ನೇ ಗಣರಾಜ್ಯೋತ್ಸವದ ಅಂಗವಾಗಿ ಧ್ವಜಾರೋಹಣ ಕಾರ್ಯಕ್ರಮ ನೆರವೇರಿತು.



ಬಿಜೆಪಿ ಗದಗ ಜಿಲ್ಲಾಧ್ಯಕ್ಷರಾದ ತೋಟಪ್ಪ(ರಾಜು) ಕುರಡಗಿ ಧ್ವಜರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ, ಎಂ.ಎಸ್. ಕರಿಗೌಡ್ರ, ಪ್ರಮುಖರುಗಳಾದ ಜಗನ್ನಾಥಸಾ ಭಾಂಡಗೆ, ಎಂ.ಎಂ. ಹಿರೇಮಠ, ಸಂಗಮೇಶ ದುಂದೂರ, ಅನಿಲ ಅಬ್ಬಿಗೇರಿ, ಕೆ.ಪಿ. ಕೋಟಿಗೌಡ್ರ, ರಮೇಶ ಸಜ್ಜಗಾರ, ರಾಜು ಹೊಂಗಲ, ಮಂಜುನಾಥ ಶಾಂತಗೇರಿ, ವಿಜಯಕುಮಾರ ಹಿರೇಮಠ, ಗೈಬುಸಾಬ ಕಲೇಬಾಯಿ, ಅಶ್ವಿನಿ ಜಗತಾಪ್, ಸ್ವಾತಿ ಅಕ್ಕಿ, ಜಯಶ್ರೀ ಅಣ್ಣಿಗೇರಿ, ಕವಿತಾ ಬಂಗಾರಿ, ಸುಮಂಗಲಾ ಕೊನೆವಾಲ, ಮಂಜುನಾಥ, ವಿನೋದ ಹಂಸನೂರ ಮುಂತಾದವರು ಉಪಸ್ಥಿತರಿದ್ದರು.



ಗದಗ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪ್ರತಿಕೋದ್ಯಮ ವಿಭಾಗದಲ್ಲಿ ಉತ್ತಮ ಸೇವೆ ಸಲ್ಲಿಸಿದ ಗಜೇಂದ್ರಗಡ ವರದಿಗಾರ ಎಸ್.ಎಂ. ಸೈಯದ್ ಅವರನ್ನು ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು. ಸಚಿವ ಎಚ್.ಕೆ. ಪಾಟೀಲ, ವಿ.ಪ ಸದಸ್ಯ ಎಸ್.ವಿ. ಸಂಕನೂರ ಸೇರಿದಂತೆ ಅಧಿಕಾರಿಗಳು ಇದ್ದರು.

## ವೃಕ್ಷಗಳಿಗೆ ಎಂದಿಗೂ ಸಾವಿಲ್ಲ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಫೆಬ್ರುವರಿ 5, 6 ಮತ್ತು 7ರಂದು ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಶತಮಾನೋತ್ಸವ ಜರುಗುತ್ತಿದೆ. ಈ ಸಮಯಕ್ಕೆ ಸರಿಯಾಗಿ ಪಟ್ಟಣದ ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿಯವರು ತಮ್ಮ ಮನೆಯಲ್ಲಿ ಬೆಳೆದ ಆಲದ ಸಸಿಯನ್ನು ಕಾಣಿಕೆಯಾಗಿ ನೀಡಿ ಸ್ತುತ್ಯವಾದ ಕಾರ್ಯವನ್ನು ಮಾಡಿದ್ದಾರೆ ಎಂದು ಶ್ರೀ ವೀರಪ್ಪಜ್ಜನವರ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಡಾ. ಎಂ.ಸಿ. ಚಪ್ಪನ್ನಮಠ ಹೇಳಿದರು. ಶ್ರೀಮಠದ ಆವರಣದಲ್ಲಿ ಅವರು ಕುಲಕರ್ಣಿಯವರು ನೀಡಿದ ಆಲದ ಸಸಿಯನ್ನು ನೆಟ್ಟು ಮಾತನಾಡಿದರು.



ವೃಕ್ಷಗಳಿಗೆ ಎಂದಿಗೂ ಸಾವಿಲ್ಲ. ಅವು ನಮಗೆ ಫಲವನ್ನು ಮತ್ತು ನೆರಳನ್ನು ಕೊಡುತ್ತವೆ. ಮನುಷ್ಯನು ತನ್ನ ಸ್ವಾರ್ಥಕ್ಕಾಗಿ ಅವುಗಳಿಗೆ ಕೊಡಲಿ ಹಾಕುವ ಮೂಲಕ ಅವುಗಳ ಅವಸಾನಕ್ಕೆ ಕಾರಣವಾಗುತ್ತಿದ್ದಾನೆ. ಆದರೆ ಕುಲಕರ್ಣಿಯವರು ಹಠಯೋಗಿ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಸಮಯದಲ್ಲಿ ಈ ಸಸಿಯನ್ನು ಶ್ರೀಮಠಕ್ಕೆ ನೀಡಿ ಬರುವ ಭಕ್ತರಿಗೆಲ್ಲ ಮುಂದಿನ ದಿನಗಳಲ್ಲಿ ನೆರಳು ಸಿಗುವಂತೆ ಮಾಡಿದ್ದಾರೆ ಎಂದರು. ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ, ಮನೆಯಲ್ಲಿ ಹೂ ಬೆಳೆಸಲೆಂದು ನಾವು ಹೂವಿನ ಕುಂಡವನ್ನು ತಂದಿದ್ದೆವು. ಕೆಲವು ದಿನ ಅದರಲ್ಲಿ ಹೂ ಬಿಟ್ಟ ನಂತರ ಹೂವಿನ ಗಿಡ ತಾನೇತಾನಾಗಿ ಒಣಗಿ ಹೋಯಿತು. ಅಲ್ಲಿ ಈ ಆಲದ ಗಿಡವು ಬೆಳೆಯತೊಡಗಿತು. ಇಂದು ಆ ಸಸಿ ಸರಿಯಾದ ಸ್ಥಾನವನ್ನು ಸೇರಿರುವುದು ನಮ್ಮ ಭಾಗ್ಯ ಎಂದರು.

ಈ ಸಂದರ್ಭದಲ್ಲಿ ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಡಾ. ಎಲ್.ಎಸ್. ಗೌರಿ, ಸುನೀಲ ಬಸವರಡ್ಡೇರ, ಶಿವನಗೌಡ ಪಾಟೀಲ, ಶೇಕಪ್ಪ ಜುಟ್ಟಲ, ಉಮೇಶ ಅರಹುಣಸಿ, ಶೇಕಪ್ಪ ಕೆಂಗಾರ, ಮೈಲಾರಪ್ಪ ಚಳ್ಳಮರದ, ಕೃಷ್ಣಪ್ಪ ಜುಟ್ಟಲ, ಅಲ್ಲಾಬಕ್ಷಿ ನದಾಫ್ ಮುಂತಾದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka